# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 165 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 13–01–2024 ಶನಿವಾರ | ಪುಟ: 4 | ಬೆಲೆ : ರೂ.2–00

Volume - 01 Issue - 165 | Title- Code: KARKAN 28269 | Chitradurga | Date: 13-01-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಉತ್ತಮ ಜೀವನಕ್ಕೆ ಮಾನವ ಹಕ್ಕುಗಳು ಅವಶ್ಯಕ 2

ಮನೆಯ ಮುದ್ದಿನ ರೂಬಿಗೆ (ನಾಯಿ) ಸೀಮಂತ ನೆರವೇರಿಸಿದ ಕುಟುಂಬ 3

ಧರ್ಮಸ್ಥಳ ಸಂಸ್ಥೆ ಮಹಿಳೆಯರಿಗೆ ಶಿಸ್ತು ಕಲಿಸುವಲ್ಲಿ ನಿರಂತರವಾಗಿ ಶ್ರಮಿಸುತ್ತಿದೆ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಶಿವಮೊಗ್ಗಕ್ಕೆ ಇಂದು ಐತಿಹಾಸಿಕ ದಿನ

**ನನ್ನ ಯುವಕ ಯುವತಿಯರು ಭ್ರಮನಿರಸನರಾಗದಂತೆ ಅವರ ಭವಿಷ್ಯಕ್ಕೆ ಶಕ್ತಿ ತುಂಬುವ ಸಲುವಾಗಿ ಯುವನಿಧಿ: ಸಿ.ಎಂ.ಸಿದ್ದರಾಮಯ್ಯ ಘೋಷಣೆ**

**ಯಾವ ಧರ್ಮದಲ್ಲಿ ಹಸಿದವರಿಗೆ ಅನ್ನ ಕೊಡುವುದಿಲ್ಲವೋ ಅಂಥ ಧರ್ಮದಲ್ಲಿ ನನಗೆ ನಂಬಿಕೆ ಇಲ್ಲ ಎಂದು ವಿವೇಕಾನಂದರು ಘೋಷಿಸಿದ್ದರು**

» ಶಿವಮೊಗ್ಗ

ಯಾವ ಧರ್ಮದಲ್ಲಿ ಹಸಿದವರಿಗೆ ಅನ್ನ ಕೊಡುವುದಿಲ್ಲವೋ ಅಂಥ ಧರ್ಮದಲ್ಲಿ ನನಗೆ ನಂಬಿಕೆ ಇಲ್ಲ ಎಂದು ವಿವೇಕಾನಂದರು ಘೋಷಿಸಿದ್ದರು. ಇವರ ಜನ್ಮ ದಿನದಂದೇ ನನ್ನ ಯುವಕ ಯುವತಿಯರು ಭ್ರಮನಿರಸನರಾಗದಂತೆ ಅವರ ಭವಿಷ್ಯಕ್ಕೆ ಶಕ್ತಿ ತುಂಬುವ ಸಲುವಾಗಿ ಯುವನಿಧಿ ಜಾರಿ ಮಾಡುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ಶಿವಮೊಗ್ಗದಲ್ಲಿ ಲಕ್ಷಾಂತರ ಯುವಸಮೂಹದ ಸಮ್ಮುಖದಲ್ಲಿ ರಾಜ್ಯ ಸರ್ಕಾರದ ಐತಿಹಾಸಿಕ ಗ್ಯಾರಂಟಿ "ಯುವನಿಧಿ"ಯೋಜನೆಯನ್ನು ಉದ್ಘಾಟಿಸಿ ಮಾತನಾಡಿದರು.

ನಾನು ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸುರ್ಜೇವಾಲ ಅವರು ಚುನಾವಣಾ ಪೂರ್ಣ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಐದೂ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ನಿರುದ್ಯೋಗ ಸಮಸ್ಯೆ, ರೈತರ ಸಮಸ್ಯೆ ಹೆಚ್ಚಾಗಿ, ಆಹಾರ ಪದಾರ್ಥಗಳ ಬೆಲೆ ಗಗನಕ್ಕೆ ಏರಿರುವ ಸಂದರ್ಭದಲ್ಲಿ ಸಮಾಜದ ಎಲ್ಲಾ ವರ್ಗಗಳ ಸಮಸ್ಯೆಗೆ ಪರಿಹಾರವಾಗಿ ನಾವು ಗ್ಯಾರಂಟಿ ಯೋಜನೆಗಳನ್ನು ರೂಪಿಸಿದೆವು. ಪ್ರಣಾಳಿಕೆಯಲ್ಲಿ ಘೋಷಿಸಿದೆವು. ಘೋಷಿಸಿದಂತೆ ಜಾರಿ ಮಾಡಿದ್ದೇವೆ. ಮೊದಲ ಗ್ಯಾರಂಟಿ ಯೋಜನೆಯಿಂದಾಗಿ 130 ಕೋಟಿ 28 ಲಕ್ಷ ಮಹಿಳೆಯರು, ಯುವತಿಯರು ಉಚಿತವಾಗಿ ಪ್ರಯಾಣ ಮಾಡಿದ್ದಾರೆ. 1 ಕೋಟಿ 65 ಲಕ್ಷ ಕುಟುಂಬಗಳಿಗೆ ಉಚಿತವಾಗಿ 200 ಯೂನಿಟ್ ವರೆಗೂ ಉಚಿತ ವಿದ್ಯುತ್ ನೀಡುತ್ತಿದ್ದೇವೆ. ಈ ಕೋಟಿ ಕುಟುಂಬಗಳು ನಯಾಪೈಸೆ ವಿದ್ಯುತ್ ಬಿಲ್ ಕಟ್ಟುವ ಹಾಗಿಲ್ಲ. ಇದೇ ರೀತಿ 5 ಕೆಜಿ ಅಕ್ಕಿ, 5 ಕೆಜಿ ಅಕ್ಕಿಯ ಹಣವನ್ನು ಪ್ರತೀ ಕುಟುಂಬಗಳಿಗೆ ಕೊಡುತ್ತಿದ್ದೇವೆ. 1 ಕೋಟಿ 17 ಲಕ್ಷ ಮಹಿಳೆಯರಿಗೆ, ಯುವತಿಯರಿಗೆ ಪ್ರತೀ ತಿಂಗಳು 2000 ರೂ ತಲುಪಿಸುತ್ತಿದ್ದೇವೆ. ಇಂಥಾ ಸಾಧನೆ ಹಿಂದೆ ಯಾವ ಕಾಲದಲ್ಲೂ ಆಗಿಲ್ಲ. ಇದನ್ನೆಲ್ಲಾ ಮಾಡಿದ್ದು ನಾವು. ನಮ್ಮದೇ ನುಡಿದಂತೆ ಮಾಡಿ ತೋರಿಸಿದ ಸರ್ಕಾರ.

ಇಂದು ಯುವನಿಧಿ ಜಾರಿ ಮಾಡಿದ್ದೇವೆ. ಯುವಕ ಯುವತಿಯರಿಗೆ ಹಣದ ಜತೆಗೆ ಉದ್ಯೋಗ ಪಡೆದುಕೊಳ್ಳಲು ಅಗತ್ಯವಾದ ಕೌಶಲ್ಯ ತರಬೇತಿಯನ್ನೂ ನೀಡಿ ಅವರಿಗೆ ಉದ್ಯೋಗ ಕೊಡಿಸುವ ದಿಕ್ಕಿನಲ್ಲಿ ನಮ್ಮ ಪ್ರಯತ್ನ ಮುಂದುವರೆಯಲಿದೆ.

ಯುವಕ ಯುವತಿಯರು ಭ್ರಮನಿರಸನರಾಗದಂತೆ ಅವರ ಭವಿಷ್ಯಕ್ಕೆ ಶಕ್ತಿ ತುಂಬುವ ಸಲುವಾಗಿ ಈ ಯುವನಿಧಿ ಯೋಜನೆ ಜಾರಿ ಮಾಡಿದ್ದೇವೆ ಎಂದರು.


ವಿವೇಕಾನಂದರ ಜನ್ಮ ದಿನದಂದೇ ಯುವನಿಧಿ ಯೋಜನೆಯನ್ನು ನಾವು ಜಾರಿ ಮಾಡಿದ್ದೇವೆ. ಈಗಾಗಲೇ 70 ಸಾವಿರ ಯುವಕ ಯುವತಿಯರು ಯೋಜನೆಗೆ ನೋಂದಣಿ ಮಾಡಿಕೊಂಡಿದ್ದಾರೆ ಎಂದು ವಿವರಿಸಿದರು. ರಾಜೀವ್ ಗಾಂಧಿ ಅವರು ದೇಶದ ಯುವಕರ ಭವಿಷ್ಯಕ್ಕಾಗಿ ಸದಾ ತುಡಿಯುತ್ತಿದ್ದರು. ಅವರ ಆಶಯಕ್ಕೆ ಪೂರಕವಾಗಿ ಯುವನಿಧಿ ಯೋಜನೆ ಮತ್ತು ನಮ್ಮ ಸರ್ಕಾರ ಕೆಲಸ ಮಾಡಲಿದೆ ಎಂದರು.

ಆದ್ದರಿಂದ ಪ್ರತಿ ಯುವಕ ಯುವತಿಯರು ಯೋಜನೆಗೆ ನೋಂದಾಯಿಸಿಕೊಂಡು ಅನುಕೂಲ ಪಡೆದುಕೊಳ್ಳಿ ಎಂದು ಕರೆ ನೀಡಿದರು. ಯಾವ ಧರ್ಮದಲ್ಲಿ ಹಸಿದವರಿಗೆ ಅನ್ನ ಕೊಡುವುದಿಲ್ಲವೋ ಅಂಥ ಧರ್ಮದಲ್ಲಿ ನನಗೆ ನಂಬಿಕೆ ಇಲ್ಲ ಎಂದು ವಿವೇಕಾನಂದರು ತಿಳಿಸಿದರು. 1985 ರಲ್ಲಿ ರಾಜೀವ್ ಗಾಂಧಿ ಅವರು ದೇಶದಲ್ಲಿ ಮೊದಲ ಬಾರಿಗೆ ವಿವೇಕಾನಂದ ಜಯಂತಿಯನ್ನು ಆರಂಭಿಸಿದರು ಎಂದು ಇತಿಹಾಸದ ಪುಟಗಳನ್ನು ಉದಾಹರಿಸಿದರು.

ಸಾಮಾಜಿಕ ನ್ಯಾಯದ ಬಗ್ಗೆ ಕೇವಲ ಭಾಷಣ ಮಾಡಿದರೆ ಸಾಲದು. ಅದಕ್ಕೆ ಕಾರ್ಯಕ್ರಮಗಳನ್ನು ರೂಪಿಸಬೇಕು. ಜಾರಿಗೆ ತರಬೇಕು. ನಮ್ಮ ಕಾಂಗ್ರೆಸ್ ಸರ್ಕಾರ ಮಾಡುತ್ತಿರುವುದು ಅದನ್ನೇ. ಹೋರಾಟದ ಹಿನ್ನೆಲೆಯ ಜಿಲ್ಲೆ ಶಿವಮೊಗ್ಗದಿಂದಲೇ "ರಾಜ್ಯ ಸರ್ವ ಜನಾಂಗದ ಶಾಂತಿಯ ತೋಟ" ಆಗಲಿ. ಇದಕ್ಕಾಗಿ ಜನ ಚಳವಳಿ ನಡೆಯಲಿ ಎಂದು ಕರೆ ನೀಡಿದರು.

ಡಿಸಿಎಂ ಡಿ.ಕೆ.ಶಿವಕುಮಾರ್, ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ಇಂಧನ ಸಚಿವ ಕೆ.ಜೆ. ಜಾರ್ಜ್, ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಕ್ರೀಡಾ ಸಚಿವ ನಾಗೇಂದ್ರ, ಮೀನುಗಾರಿಕಾ ಸಚಿವ ಮಾಂಕಳ ವೈದ್ಯ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಸಂಸದ ಬಿ.ವೈ.ರಾಘವೇಂದ್ರ, ಶಾಸಕರಾದ ಭೀಮಣ್ಣ ನಾಯಕ್, ಸಂಗಮೇಶ್, ತಮ್ಮಯ್ಯ, ಬೇಳೂರು ಗೋಪಾಲಕೃಷ್ಣ, ರಾಜೇಗೌಡ, ಶಾರದಾ ಪೂರ್ಯಾನಾಯಕ, ಚನ್ನಬಸಪ್ಪ, ತರೀಕೆರೆ ಶ್ರೀನಿವಾಸ್, ಅರುಣ್ ಕುಮಾರ್ ಸೇರಿ ಹಲವು ಪ್ರಮುಖರು ವೇದಿಕೆಯಲ್ಲಿ ಉಪಸ್ಥಿತರಿದ್ದರು.






## ಫಾಸ್ಟ್ ನ್ಯೂಸ್

### ಶುಲ್ಕ ಮರುಪಾವತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

2023–24ನೇ ಸಾಲಿಗೆ ಮೆಟ್ರಿಕ್ ನಂತರ ಮತ್ತು ಮೆರಿಟ್–ಕಂ–ಮೀನ್ಸ್ ಶುಲ್ಕ ಮರುಪಾವತಿಗೆ ಪಿ.ಯು.ಸಿ. ಡಿಪ್ಲೋಮ, ತಾಂತ್ರಿಕ ಹಾಗೂ ವೃತ್ತಿಪರ ಕೋರ್ಸುಗಳು, ಪದವಿ ಮತ್ತು ಸ್ನಾತಕೋತ್ತರ ಪದವಿಗೆ 2023–24ನೇ ಸಾಲಿನಲ್ಲಿ ದಾಖಲಾತಿ ಪಡೆದಿರುವ ಅರ್ಹ ಅಲ್ಪಸಂಖ್ಯಾತ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ಸಮುದಾಯದ ವಿಧ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜನವರಿ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಹ ವಿಧ್ಯಾರ್ಥಿಗಳಿಂದ 2023–24 ನೇ ಸಾಲಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜ.30 ಕೊನೆಯ ದಿನಾಂಕವಾಗಿದೆ. ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ http://ssp.karnataka.gov.in ಈ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ http://dom.karnataka.gov.in ಮತ್ತು ಇಲಾಖೆಯ ಸಹಾಯವಾಣಿ ಸಂಖ್ಯೆ 8277799990 ಅಥವಾ ಸಂಬಂಧಿಸಿದ ತಾಲ್ಲೂಕು ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಬಹುದು ಎಂದು ಚಿತ್ರದುರ್ಗ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

» ಚಿತ್ರದುರ್ಗ

ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2023–24ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 15 ರವರೆಗೆ ವಿಸ್ತರಿಸಲಾಗಿದೆ. ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ http://ssp.karnataka.gov.in ಈ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಿತ್ರದುರ್ಗ: ಶೀಲ ಶಂಕಿಸಿ ಪತ್ನಿ ಕೊಲೆ

» ಚಿತ್ರದುರ್ಗ

ಶೀಲ ಶಂಕಿಸಿ ಪತಿ ತನ್ನ ಪತ್ನಿಯನ್ನು ಹತ್ಯೆ ಮಾಡಿರುವ ಘಟನೆ ನೆಹರು ನಗರ ಬಡಾವಣೆಯಲ್ಲಿ ಗುರುವಾರ ರಾತ್ರಿ ನಡೆದಿದೆ. ರೇಣುಕಾ(40) ಮೃತ ಮಹಿಳೆ. ಕೊಲೆ ಮಾಡಿರುವ ಪತಿ ಮಂಜುನಾಥ್ ತಲೆ ಮರೆಸಿಕೊಂಡಿದ್ದಾನೆ. 20 ವರ್ಷಗಳ ಹಿಂದೆ ವಿವಾಹವಾಗಿದ್ದ ರೇಣುಕಾ ಹಾಗೂ ಮಂಜುನಾಥ್ ನೆಹರು ನಗರದ 1 ನೇ ಕ್ರಾಸ್ ನಲ್ಲಿ ಮನೆಯೊಂದ ಮಾಡಿಕೊಂಡು ಜೀವನ ನಡೆಸುತ್ತಿದ್ದರು.

ರೇಣುಕಾ ಮಂಜುನಾಥ್ ಅವರಿಗೆ 2 ಹೆಣ್ಣು ಮಕ್ಕಳಿದ್ದು, ಇವರಿಬ್ಬರಿಗೂ ಮದುವೆ ಮಾಡಿಕೊಡಲಾಗಿದೆ. ಹೆಣ್ಣು ಮಕ್ಕಳಿಬ್ಬರು ಬೇರೆ ಊರಿನಲ್ಲಿ ವಾಸವಿದ್ದರಿಂದ ನೆಹರು ನಗರದ ಮನೆಯಲ್ಲಿ ರೇಣುಕಾ ಮಂಜುನಾಥ್ ಇಬ್ಬರೆ ವಾಸವಿದ್ದರು. ಇತ್ತೀಚೀನ ದಿನಗಳಲ್ಲಿ ರೇಣುಕಾ ಅವರ ಶೀಲವನ್ನು ಶಂಕಿಸಿ ಮಂಜುನಾಥ್ ಪ್ರತಿದಿನ ಮನೆಯಲ್ಲಿ ಗಲಾಟೆ ಮಾಡುತ್ತಿದ್ದರು ಎಂದು ಹೇಳಲಾಗುತ್ತಿದ್ದು, ಗುರುವಾರ ರಾತ್ರಿ ಎಂದಿನಂತೆ ಮಂಜುನಾಥ್ ಗಲಾಟೆ ಮಾಡಿದ್ದಾನೆ. ನಂತರ ರೇಣುಕಾ ಮಲಗಿದ್ದ ವೇಳೆ ಮಂಜುನಾಥ್ ಚಾಕುವಿನಿಂದ ಹೆಂಡತಿ ರೇಣುಕಾ ಅವರ ಕತ್ತನ್ನು ಕೊಯ್ದು ಕೊಲೆ ಮಾಡಿ, ಮನೆಗೆ ಬೀಗವನ್ನು ಹಾಕಿಕೊಂಡು ಪರಾರಿಯಾಗಿದ್ದಾನೆ.



ಪಕ್ಕದ ಮನೆಯಲ್ಲೇ ವಾಸವಿದ್ದ ರೇಣುಕಾ ಅವರು ತಾಯಿ ಬೆಳಗ್ಗೆಯಿಂದ ಪೋನ್ ಮಾಡಿದ್ದಾರೆ. ಪೋನ್ ಯಾವುದೇ ಸ್ಪಂದನೆ ಸಿಗದ ಕಾರಣ ಮತ್ತೊಂದು ಕೀ ಯನ್ನು ಬಳಸಿ ಮನೆಯ ಬೀಗವನ್ನು ತೆಗೆದು ನೋಡಿದ್ದಾಗ ರೇಣುಕಾ ಕೊಲೆಯಾಗಿರುವುದು ಪತ್ತೆಯಾಗಿದೆ. ವಿಷಯ ತಿಳಿದ ಕೋಟೆ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ, ಪರಿಶೀಲನೆ ನಡೆಸಿದ್ದು, ಆರೋಪಿ ಮಂಜುನಾಥ್ ಗಾಗಿ ಹುಡುಕಾಟ ನಡೆಸಿದ್ದಾರೆ. ಈ ಬಗ್ಗೆ ಕೋಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.



**ಚಳ್ಳಕೆರೆ ನಗರದ ತ್ಯಾಗರಾಜನ ಚಿಗುರು ಈ–ಕಿಡ್ಸ್ ಪ್ರೀ ಸ್ಕೂಲ್‌ನಲ್ಲಿ ಶುಕ್ರವಾರ ನಡೆದ ಸ್ವಾಮಿವಿವೇಕಾನಂದ ಜನ್ಮದಿನಾಚರಣೆ ಹಾಗೂ ರಾಷ್ಟ್ರೀಯ ಯುವ ದಿನಾಚರಣೆ ಕಾರ್ಯಕ್ರಮದಲ್ಲಿ ಸ್ವಾಮಿವಿವೇಕಾನಂದ ವೇಷದಲ್ಲಿಮಕ್ಕಳು ಕಂಡರು. ಜೆ.ಸಿ.ಶಶಿಕುಮಾರ್, ಸ್ಪೂರ್ತಿಶಶಿಕುಮಾರ್, ಪುಷ್ಪಹರೀಶ್, ಶಾಂತ, ಸಾವಿತ್ರಮ್ಮ ಮೊದಲಾದವರು ಇದ್ದರು.**

## ಪ್ರಮುಖ ಸುದ್ದಿ

**ಸತತ ನಾಲ್ಕನೆ ಬಾರಿಗೆ ಸ್ವಚ್ಛ ಸರ್ವೇಕ್ಷಣಾ ಪ್ರಶಸ್ತಿ ಮುಡಿಗೇರಿಸಿಕೊಂಡ ಹೊಸದುರ್ಗ**

# ಹೊಸದುರ್ಗ ಪುರಸಭೆಗೆ ರಾಷ್ಟ್ರೀಯ ಸ್ವಚ್ಛ ಸರ್ವೇಕ್ಷಣಾ ಪ್ರಶಸ್ತಿಯ ಗರಿ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ಪಟ್ಟಣವು ನಾಲ್ಕನೆ ಬಾರಿಗೆ ರಾಷ್ಟ್ರೀಯ ಮಟ್ಟದ ಸ್ವಚ್ಛ ಸರ್ವೇಕ್ಷಣಾ 2023 ಪ್ರಶಸ್ತಿಯನ್ನು ಪಡೆದಿದ್ದು, ನವದೆಹಲಿಯ ಭಾರತ್ ಮಂಟಪಂ ನ ಪ್ರಗತಿ ಮೈದಾನ ಆವರಣದಲ್ಲಿ ಜರುಗಿದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಹರ್ದಿಪ್ ಸಿಂಗ್ ಪುರಿ ಅವರಿಂದ ಪ್ರಶಸ್ತಿ ಸ್ವೀಕರಿಸಿದರು.



ಹೊಸದುರ್ಗ ಪಟ್ಟಣದಲ್ಲಿನ ಘನ ತ್ಯಾಜ್ಯ ವಿಲೇವಾರಿ, ಮನೆ ಮನೆ ಕಸ ಸಂಗ್ರಹ, ತ್ಯಾಜ್ಯದ ಸಂಸ್ಕರಣೆ, ವಿಲೇವಾರಿ, ಸ್ವಚ್ಛತೆ ಕುರಿತಂತೆ ಕೇಂದ್ರ ಸರ್ಕಾರ ನಡೆಸಿದ ರಾಷ್ಟ್ರೀಯ ಮಟ್ಟದ ಮೌಲ್ಯಮಾಪನದಲ್ಲಿ 01 ಲಕ್ಷ ಜನಸಂಖ್ಯೆಯೊಳಗಿನ ಪಟ್ಟಣದ ವಿಭಾಗದಲ್ಲಿ ಹೊಸದುರ್ಗ ಪಟ್ಟಣಕ್ಕೆ ಸ್ವಚ್ಛ ಸರ್ವೇಕ್ಷಣಾ 2023 ಪ್ರಶಸ್ತಿ ಗಳಿಸಿದೆ. ಕೇಂದ್ರ ಸರ್ಕಾರದ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯದ ವತಿಯಿಂದ ಆಗಮಿಸಿದ್ದ ತಂಡವು, ಹೊಸದುರ್ಗ ಪಟ್ಟಣದಲ್ಲಿನ ಮಾರುಕಟ್ಟೆ, ಬಸ್ ನಿಲ್ದಾಣ ಮುಂತಾದ ಪ್ರದೇಶಗಳಿಗೆ ಸ್ವಯಂ ಹಾಗೂ ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿ ಮೌಲ್ಯಮಾಪನ ಮಾಡಿತ್ತು. ಅಲ್ಲದೆ ಪಟ್ಟಣದ ಜನಸಂಖ್ಯೆಯ ಶೇ. 20 ರಷ್ಟು ಜನರಿಂದ ಈ ಕುರಿತು ಫೀಡ್ ಬ್ಯಾಕ್ ಪಡೆದುಕೊಂಡಿತ್ತು. ಇದರ ಜೊತೆಗೆ ಪಟ್ಟಣದಲ್ಲಿ ಬಯಲು ಬಹಿರ್ದೆಸೆ ಇಲ್ಲದಿರುವಿಕೆ, ನಗರದಲ್ಲಿನ ಕಸ ಸಂಗ್ರಹಣೆ, ತ್ಯಾಜ್ಯ ವಿಲೇವಾರಿ ವ್ಯವಸ್ಥೆ ಬಗ್ಗೆಯೂ ಮೌಲ್ಯಮಾಪನ ಮಾಡಿತ್ತು.

ಕೇಂದ್ರ ಸರ್ಕಾರದಿಂದ ಸ್ವಚ್ಛ ಸರ್ವೇಕ್ಷಣೆ ಕಾರ್ಯಕ್ರಮದಡಿ ರಾಜ್ಯದ 318 ನಗರ ಸ್ಥಳೀಯ ಸಂಸ್ಥೆಗಳು, ದೇಶದ 4414 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇದೇ ರೀತಿ ಮೌಲ್ಯಮಾಪನ ಕಾರ್ಯ ಕೈಗೊಳ್ಳಲಾಗಿದ್ದು, ದೇಶಾದ್ಯಂತ ಒಟ್ಟು 51 ನಗರ ಸ್ಥಳೀಯ ಸಂಸ್ಥೆಗಳು ಪ್ರಶಸ್ತಿಗೆ ಆಯ್ಕೆಯಾಗಿದ್ದು, ಈ ಪೈಕಿ ದೇಶದ ದಕ್ಷಿಣ ವಲಯದಿಂದ ಕರ್ನಾಟಕ ರಾಜ್ಯದ ಹೊಸದುರ್ಗ ಪಟ್ಟಣವು ಸ್ವಚ್ಛ ಸರ್ವೇಕ್ಷಣಾ 2023 ಪ್ರಶಸ್ತಿಗೆ ಆಯ್ಕೆಯಾಗಿದೆ. ವಿಶೇಷವೆಂದರೆ ಹೊಸದುರ್ಗ ಪಟ್ಟಣವು ನಾಲ್ಕನೆ ಬಾರಿ ಈ ಪ್ರಶಸ್ತಿ ಪಡೆದುಕೊಂಡಿದ್ದು, ಜಿಲ್ಲೆಯ ಗರಿಮೆಯನ್ನು ಹೆಚ್ಚಿಸಿದೆ.

ನವದೆಹಲಿಯ ಭಾರತ್ ಮಂಟಪಂ ನ ಪ್ರಗತಿ ಮೈದಾನ ಆವಣದಲ್ಲಿ ಜರುಗಿದ ಸಮಾರಂಭದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಹರ್ದಿಪ್ ಸಿಂಗ್ ಪುರಿ ಅವರಿಂದ ಪ್ರಶಸ್ತಿ ಸ್ವೀಕರಿಸಿದರು. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ಮನೋಜ್ ಜೋಶಿ, ಸ್ವಚ್ಛ ಭಾರತ್ ಮಿಷನ್ ಅಭಿಯಾನದ ನಿರ್ದೇಶಕ ಲಕ್ಷ್ಮೀಕಾಂತ್ ರೆಡ್ಡಿ, ಚಿತ್ರದುರ್ಗ ಜಿಲ್ಲೆ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಹೊಸದುರ್ಗ ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು ಅವರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಹೊಸದುರ್ಗ ಪಟ್ಟಣದಲ್ಲಿ ಕಸ ವಿಲೇವಾರಿ, ಶೌಚಾಲಯ ಬಳಕೆ, ಪಟ್ಟಣದ ಸ್ವಚ್ಛತೆ, ತ್ಯಾಜ್ಯ ಸಂಸ್ಕರಣೆ ಮುಂತಾದ ಕಾರ್ಯಗಳಲ್ಲಿ ಅಲ್ಲದೆ ಪರಿಸರದ ಬಗ್ಗೆ ಸಾರ್ವಜನಿಕರಲ್ಲಿ ಇರುವ ಕಾಳಜಿ, ಪುರಸಭೆಯ ಅಧಿಕಾರಿ ಸಿಬ್ಬಂದಿ, ಪೌರಕಾರ್ಮಿಕರು, ಎಲ್ಲ ಜನಪ್ರತಿನಿಧಿಗಳು ಕೈಗೊಂಡ ಜಾಗೃತಿ ಕಾರ್ಯಕ್ರಮಗಳು ಹಾಗೂ ಸಾರ್ವಜನಿಕರ ಸಹಕಾರದಿಂದಾಗಿ ಹೊಸದುರ್ಗ ಪಟ್ಟಣಕ್ಕೆ ನಾಲ್ಕನೆ ಬಾರಿಗೆ ರಾಷ್ಟ್ರೀಯ ಮಟ್ಟದ ಸ್ವಚ್ಛ ಸರ್ವೇಕ್ಷಣಾ ಪ್ರಶಸ್ತಿ ಬರಲು ಸಾಧ್ಯವಾಗಿದೆ ಎನ್ನುತ್ತಾರೆ ಜಿಲ್ಲಾಧಿಕಾರಿ ದಿವ್ಯಪ್ರಭು ಅವರು.

# ಉತ್ತಮ ಜೀವನಕ್ಕೆ ಮಾನವ ಹಕ್ಕುಗಳು ಅವಶ್ಯಕ

## ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಯುವ ಜನರಿಗೆ ಕಾನೂನು ಅರಿವು-ನೆರವು ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾ. ಎಂ.ವಿಜಯ್

» **ಚಿತ್ರದುರ್ಗ**

"ಸಾರ್ವಜನಿಕರು ಯಾವುದೇ ಅಡೆತಡೆ ಇಲ್ಲದೇ ಸಮಾಜದಲ್ಲಿ ಘನತೆಯಿಂದ ಜೀವನ ನಡೆಸಲು ಮಾನವ ಹಕ್ಕುಗಳು ಅವಶ್ಯಕ" ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ಚಿತ್ರದುರ್ಗ ತಾಲ್ಲೂಕು ಜಿ.ಆರ್. ಹಳ್ಳಿಯ ದಾವಣಗೆರೆ ವಿಶ್ವವಿದ್ಯಾಲಯ ಜ್ಞಾನಗಂಗೋತ್ರಿ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿಶುಕ್ರವಾರಯುವವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ, ನೆಹರು ಯುವ ಕೇಂದ್ರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ದಾವಣಗೆರೆ ವಿಶ್ವವಿದ್ಯಾನಿಲಯ ಜಿ.ಆರ್.ಹಳ್ಳಿ ಜ್ಞಾನ ಗಂಗೋತ್ರಿ ಸ್ನಾತಕೋತ್ತರ ಅಧ್ಯಯನ ಕೇಂದ್ರ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಸ್ವಾಮಿ ವಿವೇಕಾನಂದರ 161ನೇ ಜನ್ಮ ದಿನಾಚರಣೆ-ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಯುವ ಜನರಿಗೆ ಕಾನೂನು ಅರಿವು-ನೆರವು ಕಾರ್ಯಕ್ರಮ ಉದ್ಘಾಟಿಸಿ, ಮಾನವ ಹಕ್ಕುಗಳ ಕುರಿತು ಉಪನ್ಯಾಸ ನೀಡಿದರು.

ನಮಗೆ ನೈಸರ್ಗಿಕವಾಗಿ, ನಮ್ಮ ಅವಶ್ಯಕತೆ, ಉಳಿವಿಗಾಗಿ, ಅಸ್ತಿತ್ವಕ್ಕಾಗಿ ಇರಬೇಕಾದ ಮೂಲಭೂತ ಹಕ್ಕು ಮತ್ತು ಸ್ವಾತಂತ್ರ್ಯವೇ ಮಾನವ ಹಕ್ಕುಗಳು. ಈ ಮಾನವ ಹಕ್ಕುಗಳು ಜಾಗತಿಕವಾಗಿ ಎಲ್ಲರಿಗೂ ಯಾವುದೇ ಲಿಂಗಭೇದವಿಲ್ಲದೇ ಸಿಗುವಂತಹ ಹಕ್ಕು ಮತ್ತು ಸ್ವಾತಂತ್ರ್ಯ ಎಂದು ಹೇಳಿದರು.




ಮಾನವ ಹಕ್ಕುಗಳ ಇಲ್ಲದಿದ್ದರೆ ಸಮಾಜದಲ್ಲಿ ಅರಾಜಕತೆ ಸೃಷ್ಟಿಯ ಜೊತೆಗೆ ಮನುಷ್ಯನ ಅಸ್ತಿತ್ವವೂ ಕಳೆದುಹೋಗಲಿದೆ. ಹಾಗಾಗಿ ಮಾನವ ಹಕ್ಕುಗಳ ರಕ್ಷಣೆಗಾಗಿ ಜಿಲ್ಲಾ, ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಮಾನವ ಹಕ್ಕುಗಳ ಆಯೋಗ ಇರಲಿದ್ದು, ಮಾನವ ಹಕ್ಕುಗಳ ಉಲ್ಲಂಘನೆಯಾದ ಸಂದರ್ಭದಲ್ಲಿ ರಕ್ಷಣೆ ನೀಡಿ, ಉಲ್ಲಂಘನೆ ಮಾಡಿದವರ ವಿರುದ್ಧ ಕ್ರಮಕೈಗೊಳ್ಳಲಾಗುತ್ತಿದೆ ಎಂದು ತಿಳಿದರು.

ಜಿಲ್ಲಾ ಯುವಜನ ಅಧಿಕಾರಿ ಎನ್.ಸುಹಾಸ್ ಮಾತನಾಡಿ, ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಅಂಗವಾಗಿ ದೇಶದೆಲ್ಲೆಡೆ ರಾಷ್ಟ್ರೀಯ ಯುವ ದಿನಾಚರಣೆ ಆಚರಿಸಲಾಗುತ್ತಿದೆ. ಯುವಜನರನ್ನು ಒಳ್ಳೆಯ ಪ್ರಜೆಗಳಾಗಿ, ಉತ್ತಮ ವ್ಯಕ್ತಿತ್ವ ನಿರ್ಮಾಣ, ದೇಶದ ಪ್ರಗತಿಯಲ್ಲಿ ಯುವಜನರು ಸಕ್ರಿಯವಾಗಿ ತೊಡಗಿಸಿಕೊಳ್ಳುವ ನಿಟ್ಟಿನಲ್ಲಿ ಯುವ ದಿನಾಚರಣೆ ಆಚರಿಸಲಾತ್ತಿದೆ ಎಂದು ತಿಳಿಸಿದರು.

ಭಾರತ ದೇಶವು ಹೆಚ್ಚಿನ ಯುವ ಜನರನ್ನು ಹೊಂದಿರುವ ದೇಶವಾಗಿದ್ದು, ಯುವ ಜನರು ದೇಶದ ನಿರ್ಮಾಣದ ಕಡೆ ಹಾಗೂ ಉತ್ತಮ ವ್ಯಕ್ತಿತ್ವ ನಿರ್ಮಾಣದ ಕಡೆ ಒಲವು ತೋರಬೇಕು. ಸ್ವಾಮಿ ವಿವೇಕಾನಂದರ ಸಂದೇಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಅವರು ತೋರಿದ ದಾರಿಯಲ್ಲಿ ನಡೆಯೋಣ ಎಂದು ಸಲಹೆ ನೀಡಿದರು.

ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ ಮಾತನಾಡಿ, ಯುವ ಜನತೆ ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ನೆನಪಿಸಿಕೊಳ್ಳಬೇಕು. ಯುವ ಜನರ ಪ್ರೇರಣೆ, ಮೌಲ್ಯಗಳ ಬಹುದೊಡ್ಡ ಆದರ್ಶ ವ್ಯಕ್ತಿತ್ವ ಹೊಂದಿರುವ ವಿವೇಕಾನಂದರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರು ಸಾಗಿದ ದಾರಿಯಲ್ಲಿ ಹೆಜ್ಜೆ ಹಾಕಬೇಕು ಎಂದರು.

ದೇಶದ ಪ್ರತಿಯೊಬ್ಬ ನಾಗರಿಕರು ಕೂಡ ನಮ್ಮ ಹಕ್ಕು ಹಾಗೂ ಕರ್ತವ್ಯಗಳು ಕುರಿತು ಅರಿವು ಹಾಗೂ ತಿಳುವಳಿಕೆ ಹೊಂದಿರಬೇಕು ಎಂದು ಸಲಹೆ ನೀಡಿದರು.

ಜಿ.ಆರ್.ಹಳ್ಳಿ ಸ್ನಾತಕೋತ್ತರ ಅಧ್ಯಯನ ಕೇಂದ್ರ ಕನ್ನಡ ವಿಭಾಗದ ವಿಷಯ ಸಂಯೋಜಕ ಡಾ.ಹೆಚ್.ಜಿ.ವಿಜಂುಕುವುಾರ್ ಮಾತನಾಡಿ, ಪ್ರತಿಯೊಂದು ರಾಷ್ಟ್ರದ ಅಭಿವೃದ್ಧಿಯಲ್ಲಿ ಯುವ ಸಮುದಾಯದ ಪಾತ್ರ ಮಹತ್ವವಾದುದು. ಜಾತಿ, ಧರ್ಮ, ರಾಜಕೀಯ ಪಕ್ಷಗಳನ್ನು ಮೀರಿ ಯುವ ಸಮುದಾಯ ಹೊರಬಂದರೆ ಸದೃಢ ರಾಜ್ಯ ನಿರ್ಮಾಣ ಮಾಡಬಹುದು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್, ದಾವಣಗೆರೆ ವಿಶ್ವವಿದ್ಯಾಲಯ ಜ್ಞಾನ ಗಂಗೋತ್ರಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಅರ್ಥಶಾಸ್ತ್ರ ಅಧ್ಯಯನ ವಿಭಾಗದ ಸಂಯೋಜಕ ಡಿ.ಹೆಚ್.ಗಿರೀಶ, ಸಸ್ಯಶಾಸ್ತ್ರ ಅಧ್ಯಯನ ವಿಭಾಗದ ಸಂಯೋಜಕಿ ನಿವೇದಿತಾ ಸೇರಿದಂತೆ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಹಾಯಕ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಕಡದನಕೆರೆ ಸರ್ಕಾರಿ ಶಾಲೆ ದತ್ತು ಪಡೆದ ಸದ್ಗುರು ಸಂಸ್ಥೆ

» **ಹೊಸದುರ್ಗ**

ಮೂಲಭೂತ ಸೌಕರ್ಯಗಳಿಂದ ವಂಚಿತವಾದ ಗ್ರಾಮಗಳ ಸರ್ಕಾರಿ ಶಾಲೆಗಳ ಸರ್ವತೋಮುಖ ಅಭಿವೃದ್ಧಿಯೇ ಸದ್ಗುರು ಆಯುರ್ವೇದ ಸಂಸ್ಥೆಯ ಮೂಲ ಉದ್ದೇಶವಾಗಿದ್ದು, ಇಂತಹ ಶಾಲೆಗಳನ್ನು ಗುರುತಿಸಿ, ದತ್ತು ಪಡೆದು ಮೂಲಸೌಕರ್ಯಗಳನ್ನು ಒದಗಿಸುವ ಕೆಲಸವನ್ನು ನಮ್ಮ ಸದ್ಗುರು ಆಯುರ್ವೇದ ಸಂಸ್ಥೆ ಮಾಡುತ್ತಿದೆ ಎಂದು ಸದ್ಗುರು ಸಂಸ್ಥೆಯ ಮಾಲೀಕ ಡಿ.ಎಸ್. ಪ್ರದೀಪ್ ತಿಳಿಸಿದರು.

ತಾಲೂಕಿನ ಕಡದನಕೆರೆ ಸರ್ಕಾರಿ ಶಾಲೆಯ ದತ್ತು ಸ್ವೀಕಾರ ಕಾರ್ಯಕ್ರಮದಲ್ಲಿ ಶುಕ್ರವಾರ ಪಾಲ್ಗೊಂಡು ಮಾತನಾಡಿದ ಅವರು, ಶೋಷಿತ, ಶಿಕ್ಷಣ ಮತ್ತು ಮೂಲಭೂತ ಸೌಕರ್ಯ ದಿಂದ ವಂಚಿತವಾದ ಬಡ ಕುಟುಂಬದ ಮಕ್ಕಳು ಕೂಡ ಮೌಲ್ಯಯುತ ಶಿಕ್ಷಣ ಕಲಿತು, ತನ್ನ ಬದುಕು ಕಟ್ಟಿಕೊಂಡಾಗ ಗ್ರಾಮ ಹಾಗೂ ದೇಶದ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸರ್ಕಾರಿ ಶಾಲೆಗಳಲ್ಲಿ ವಿದ್ಯೆ ಕಲಿಸುತ್ತಿರುವ ಶಿಕ್ಷಕರು ಮೂಲತಃ ಸರ್ಕಾರಿ ಶಾಲೆಗಳಲ್ಲಿಯೇ ಓದಿದವರು. ಇಂತಹ ಶಿಕ್ಷಕರಿಂದ, ಮಕ್ಕಳಿಗೆ ಬೇಕಾದ ನೈತಿಕ ಮತ್ತು ಭೌತಿಕ ಶಿಕ್ಷಣವನ್ನು ಕೊಡಿಸಲು ಸಾಧ್ಯವಾಗುತ್ತದೆ. ಒಬ್ಬ ಮೌಲ್ಯಯುತ ಶಿಕ್ಷಕ ನಾನು ಕಲಿಸಿದ ಶಿಕ್ಷಣದಲ್ಲಿ ಬದ್ಧತೆ, ಹಾಗೂ ಕಾರ್ಯಕ್ಷಮತೆ ಮುಖ್ಯವಾಗಿರಬೇಕು.



ಕಡದಿನಕೆರೆ ಶಾಲೆಯಲ್ಲಿ ಎಷ್ಟು ಮಕ್ಕಳು ಶಿಕ್ಷಣ ಕಲಿಯುತ್ತಿದ್ದಾರೆ ಎಂಬುದು ಮುಖ್ಯವಲ್ಲ. ಇಲ್ಲಿಂದ ಖಾಸಗಿ ಶಾಲೆಗಳಿಗೆ ತಮ್ಮ ಮಕ್ಕಳನ್ನು ವಿದ್ಯಾಭ್ಯಾಸಕ್ಕಾಗಿ ಕಳಿಸುವ ಪೋಷಕರು ಇಲ್ಲಿನ ಸರ್ಕಾರಿ ಶಾಲೆಯ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಕಂಡು ಅವರ ಮಕ್ಕಳನ್ನು ಸಹ ಮುಂದೆ ಇದೇ ಶಾಲೆಗೆ ಸೇರಿಸುವಂತಾಗಬೇಕು. ಆ ರೀತಿಯಲ್ಲಿ ಈ ಶಾಲೆಯನ್ನ ಅಭಿವೃದ್ಧಿಪಡಿಸುತ್ತೇವೆ ಎಂದು ಹೇಳಿದರು.ಇದೇ ಸಂದರ್ಭದಲ್ಲಿ ಯುವ ಮುಖಂಡ ಶ್ರೀನಿವಾಸ್ ಮಾತನಾಡಿ, ನಮ್ಮ ಊರಿನ ಮಕ್ಕಳು ಸದ್ಗುರು ಆಯುರ್ವೇದ ಸಂಸ್ಥೆಯ ಸಹಕಾರದಿಂದ ಬೆಳೆದು, ನಾಳೆ ಉನ್ನತ ಅಧಿಕಾರಿಗಳಾಗಿ ಅವರಿಂದಲೂ ಇಂತಹ ಶಾಲೆಗಳು ಅಭಿವೃದ್ಧಿಯಾಗಬೇಕೆಂಬುದೇ ನನ್ನ ಆಶಯ ಎಂದರು.

ಈ ವೇಳೆ ಕಾರ್ಯಕ್ರಮದಲ್ಲಿ ಚಿಂತಕ, ಸಮಾಜ ಸೇವಕ ತುಂಬಿನಕೆರೆ ಬಸವರಾಜ್ ಶಿಕ್ಷಕರಾದ ಮಂಜುನಾಥ್, ಚಿದಾನಂದ್, ರವಿಕುಮಾರ್, ಲಕ್ಷ್ಮಿ, ಎಸ್ ಡಿ ಎಂ ಸಿ ಸದಸ್ಯ ಶ್ರೀನಿವಾಸ್ ಗ್ರಾ.ಪಂ.ಸದಸ್ಯರಾದ ರಂಗನಾಥ್, ಇಂದಿರಮ್ಮ ದೇವರಾಜ್, ಓಂಕಾರ್ ನಾಯ್ಕ್, ರಾಮು, ಚಂದ್ರು, ತ್ಯಾಗರಾಜ್ ಮತ್ತು ವೆಂಕಟೇಶ್ ಸೇರಿದಂತೆ ಗ್ರಾಮದ ಮುಖಂಡರು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳಿದ್ದರು.

# ಮಾತೆ ಶಾರದೆಯ ಆಶೀರ್ವಾದ ಸದಾ ನಿನಗಿರಲಿ: ಮಾತಾಶ್ರೀ ಚೈತನ್ಯಮಯಿ




» **ಹಿರಿಯೂರು**

ಭಾರತ ,ನೇಪಾಳ್ , ಭೂತಾನ್ ಸೈಕಲ್ ಯಾತ್ರೆ ಕೈಗೊಂಡಿರುವ ಸಂತೋಷ್ ಕಸವನಹಳ್ಳಿ ಅವರಿಗೆ ಸ್ವಾಮಿ ವಿವೇಕಾನಂದರ ಫೋಟೋ, ಕೊಟ್ಟು ಚಾಲನೆ ನೀಡಿ ಮಾತನಾಡಿದ ಮಾತಾಶ್ರೀ ಅವರು ಯುವಕರು ಪ್ಲಾಸ್ಟಿಕ್ ನಿಷೇಧ ಮತ್ತು ಮಾಲಿನ್ಯ ರಹಿತ ಪ್ರವಾಸ ಕೈಗೊಂಡಿರುವುದು ತುಂಬಾ ಆದರ್ಶವಾದ ಕಾರ್ಯ ಇಂತಹ ಸತ್ಕಾರ್ಯಕ್ಕೆ ಮಾತಾಶ್ರೀ ಅವರ ಹಾಗೂ ವಿವೇಕಾನಂದರ ರಾಮಕೃಷ್ಣ ಪರಮಹಂಸರ ಆಶೀರ್ವಾದ ಸದಾ ಇರುತ್ತದೆ ಎಂದು ಆಶೀರ್ವದಿಸಿ ಸೈಕಲ್ ಯಾತ್ರೆಗೆ ಚಾಲನೆ ನೀಡಿದರು. ಹಾಗೂ ಹಿರಿಯೂರಿನ ರೋಟರಿ ಎಲ್. ಆನಂದ ಶೆಟ್ರು ಮಾತನಾಡಿ ನಮ್ಮ ರೋಟರಿ ಸಂಸ್ಥೆಯಿಂದ ಪರಿಚಯ ಪತ್ರ ಕೊಟ್ಟಿದ್ದೇವೆ ವಿಶ್ವದಾದ್ಯಂತ ಇರುವ ರೋಟರಿ ಸಂಸ್ಥೆಗಳು ನಿಮ್ಮ ಬೆಂಬಲಕ್ಕೆ ಪ್ರಯಾಣದ ಸಂದರ್ಭದಲ್ಲಿ ನಿಮಗೆ ಅನುಕೂಲಗಳನ್ನು ಮಾಡಲಿವೆ ಎಂದು ತಿಳಿಸಿದರು. ಇನ್ನೋರ್ವ ರೋಟರಿಯನ್ ಬಿ ಕೆ .ನಾಗಣ್ಣ ಮಾತನಾಡಿ ನಿನ್ನ ಸೈಕಲ್ ಯಾತ್ರೆಯ ಒಂದು ವರ್ಷದ ಮೊಬೈಲ್ ರೀಚಾರ್ಜ್ ಅನ್ನು ನನ್ನ ಕೊಡುಗೆಯಾಗಿ ಸ್ವೀಕರಿಸಬೇಕು ಎಂದು ತಿಳಿಸಿದರು.

# ಹಾಸ್ಟೆಲ್‌ಗೆ ನ್ಯಾಯಾಧೀಶರ ಧಿಡೀರ್ ಭೇಟಿ: ಹಾಸ್ಟೆಲ್‌ನ ಅವ್ಯವಸ್ಥೆ ಕಂಡು ಬೇಸರ

» **ಹೊಸದುರ್ಗ**

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಿಂಭಾಗದಲ್ಲಿರುವ ಬಿಸಿಎಂ ಹಾಸ್ಟೆಲ್ಗಳು ಮತ್ತು ಸಮಾಜ ಕಲ್ಯಾಣ ಇಲಾಖೆ ಕಚೇರಿ ಪಕ್ಕದಲ್ಲಿರುವ ಹಾಸ್ಟೆಲ್ಗಳಿಗೆ ಶುಕ್ರವಾರ ಹೊಸದುರ್ಗ ನ್ಯಾಯಾಲಯದ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಶಿವರಾಜು ಭೇಟಿ ನೀಡಿ, ವಿದ್ಯಾರ್ಥಿಗಳ ಕುಂದುಕೊರತೆ ಮತ್ತು ಸ್ವಚ್ಛತೆಯ ಬಗ್ಗೆ ವಿಚಾರಿಸಿದರು. ವಿದ್ಯಾರ್ಥಿನಿಯರ ಹಾಸ್ಟೆಲ್ಗಳಿಗೆ ಮಹಿಳಾ ವಕೀಲರೊಂದಿಗೆ ಭೇಟಿ ನೀಡಿ, ಹಾಸ್ಟೆಲ್ ಒಳಭಾಗದಲ್ಲಿರುವ ಅಡುಗೆ ರೂಂ, ಶೌಚಾಲಯಗಳ ಸ್ವಚ್ಛತೆಯನ್ನು



ಪರಿಶೀಲಿಸಿದರು. ಶೌಚಾಲಯ ಮತ್ತು ವಿದ್ಯಾರ್ಥಿನಿಯರು ಮಲಗುವ ರೂಂಗಳ ಅವ್ಯವಸ್ಥೆ ಕಂಡು ಬೇಸರ ವ್ಯಕ್ತಪಡಿಸಿ, ಹಾಸ್ಟೆಲ್ ನಿರ್ವಾಹಕರ ಮೇಲೆ ಸರಿಯಾದ ಕ್ರಮ ತೆಗೆದುಕೊಳ್ಳುವಂತೆ ಜಿಲ್ಲಾ ನ್ಯಾಯಾಲಯಕ್ಕೆ ತಿಳಿಸಿದರು. ಹಾಸ್ಟೆಲ್ ನಲ್ಲಿದ್ದ ಎಲ್ಲಾ ವಿದ್ಯಾರ್ಥಿಗಳನ್ನು ಒಂದು ಪ್ರತ್ಯೇಕ ಕೊಠಡಿಯಲ್ಲಿ ಕೂರಿಸಿಕೊಂಡು, ಸಮಸ್ಯೆಗಳನ್ನು ಆಲಿಸಿದರು. ಹಾಸ್ಟೆಲ್ ನಲ್ಲಿ ಸೊಳ್ಳೆಗಳ ಕಾಟ ಬಹಳಷ್ಟಿದೆ. ಒಂದು ರೂಮಿನಲ್ಲಿ ಐದರಿಂದ ಹತ್ತು ವಿದ್ಯಾರ್ಥಿನಿಯರು ಇರುವುದರಿಂದ ಕುಳಿತುಕೊಳ್ಳಲು, ಮಲಗಲು ಬಹಳ ಸಮಸ್ಯೆಯಾಗುತ್ತಿದೆ. ಕುಳಿತು ಓದುವುದಕ್ಕೆ ವಾಚನಾಲಯ ಮತ್ತು ಗ್ರಂಥಾಲಯ ಬೇಕಿದೆ. ಸ್ನಾನ ಮಾಡಲು ಬಿಸಿ ನೀರು ಬರುವುದಿಲ್ಲ. ತಣ್ಣೀರಿನಿಂದ ಚಳಿಗಾಲದಲ್ಲಿ ಸ್ನಾನ ಮಾಡಲು ಆಗುವುದಿಲ್ಲ. ಬಹಳಷ್ಟು ಸ್ನಾನದ ಗೃಹಗಳಿಗೆ ಬಾಗಿಲುಗಳೆ ಇಲ್ಲದಾಗಿದೆ. ಸ್ವಿಚ್ ಬೋರ್ಡ್ ಗಳ ಸಮಸ್ಯೆಯಿದೆ. ನಮ್ಮ ಸಮಸ್ಯೆ ಬಗ್ಗೆ ಹಲವಾರು ಬಾರಿ ಹಾಸ್ಟೆಲ್ ಮೇಲ್ವಿಚಾರಕರು, ಸಂಬಂಧಪಟ್ಟ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದರೂ, ಸಮಸ್ಯೆ ಪರಿಹಾರವಾಗಿಲ್ಲವೆಂದು ನ್ಯಾಯಾಧೀಶರ ಎದುರು ವಿದ್ಯಾರ್ಥಿಗಳು ತಮ್ಮ ಸಮಸ್ಯೆಗಳನ್ನು ಬಿಚ್ಚಿಟ್ಟರು.

**ಪ್ರಮುಖ ಸುದ್ದಿ**

# ದೇಶದ ಹಿರಿಮೆ ಪ್ರಖ್ಯಾತಿಗೊಳಿಸಿದ ವಿವೇಕಾನಂದರು

» **ಚಿತ್ರದುರ್ಗ**

ಭೂಪಟದಲ್ಲಿ ಭಾರತ ದೇಶವನ್ನು ಎಂದು ಕಾಣುವಂತೆ ಮಾಡಿದ ಮಹಾನ್ ವ್ಯಕ್ತಿ ಸ್ವಾಮಿ ವಿವೇಕಾನಂದರು ಎಂದು ನಿವೃತ್ತ ಪ್ರಾಂಶುಪಾಲ ಎನ್.ನರಸಿಂಹಮೂರ್ತಿ ಅಭಿಪ್ರಾಯಪಟ್ಟಿದ್ದಾರೆ.

ನಗರದ ಬಸವೇಶ್ವರ ಟಾಕೀಸ್ ಬಳಿಯಲ್ಲಿನ ಸಿಲಿಕಾನ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ಇಂದು ಹಮ್ಮಿಕೊಂಡಿದ್ದ ಸ್ವಾಮಿ ವಿವೇಕಾನಂದರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿವೇಕಾನಂದರು ಬಾಲ್ಯದಿಂದಲೇ ವೇದ, ಉಪನಿಷತ್ ಸೇರಿದಂತೆ ಇತರೆ ವಿಷಯಗಳ ಬಗ್ಗೆ ಆಸಕ್ತಿಯನ್ನು ಹೊಂದಿದ್ದರು. ಅದರ ಬಗ್ಗೆ ತಿಳಿದುಕೊಳ್ಳುವ ಆಸಕ್ತಿಯನ್ನು ಸಹಾ ಹೊಂದಿದ್ದು ಇದಕ್ಕಾಗಿ ಗುರುಗಳನ್ನು ಸಹಾ ಹುಡುಕಿಕೊಂಡು ಹೊರಟಿದ್ದರು. ಭಾರತದ ಸಂಸ್ಕೃತಿಯನ್ನು ಬೇರೆ ದೇಶಗಳಲ್ಲಿ ಹರಡುವುದರ ಮೂಲಕ ನಮ್ಮ ದೇಶದ ಗೌರವವನ್ನು ಹೆಚ್ಚಿಸಿದ್ದಾರೆ



ಎಂದರು.ನಮ್ಮ ದೇಶದ ಹಿರಿಮೆಯನ್ನು ಬೇರೆ ದೇಶದಲ್ಲಿ ಪ್ರಖ್ಯಾತಿಗೊಳಿಸಿದ ಕೀರ್ತಿ ಸ್ವಾಮಿ ವಿವೇಕಾನಂದರಿಗಿದೆ. ಹಲವಾರು ವರ್ಷಗಳ ಹಿಂದೆ ನಮ್ಮ ದೇಶವನ್ನು ಬೇರೆ ದೇಶಗಳು ಕೀಳಾಗಿ ಕಾಣುತ್ತಿದ್ದರು ಸ್ವಾಮಿ ವಿವೇಕಾನಂದರು ಭಾಷಣ ಮಾಡಿದ ಮೇಲೆ ನಮ್ಮ ದೇಶವನ್ನು ಉನ್ನತ ಮಟ್ಟದಲ್ಲಿ ತೆಗೆದುಕೊಂಡು ಹೋಗಿದ್ದಾರೆ. ಚಿಕಾಗೂ ಸಮ್ಮೇಳನದಲ್ಲಿ ಕೇವಲ 5 ನಿಮಿಷ ಬಾಷಣ ಮಾಡಲು ಸಿದ್ದರಾಗಿದ್ದ ಸ್ವಾಮಿ ವಿವೇಕಾನಂದರ ಭಾಷಣದಿಂದ ಅಲ್ಲಿನ ಜನತೆ ಮತ್ತೇ ಮಾತನಾಡಲು ಹೇಳುವುದರ ಮೂಲಕ ವಿವೇಕಾನಂದ ಮಾತುಗಳಿಂದ ಪ್ರೇರೇಪಿತರಾದರು. ಈ ಮಾತುಗಳನ್ನು ಹಾಡುವುದರ ಮೂಲಕ ಭೂಪಟದಲ್ಲಿ ನಮ್ಮ ದೇಶದ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಇಂದಿನ ದಿನಮಾನದಲ್ಲಿ ಯುವ ಜನತೆ ದೇಶ ಭಕ್ತಿಯನ್ನು ಹೆಚ್ಚಿಸಿಕೊಳ್ಳಬೇಕಿದೆ ಎಂದರು.ಸಿಲಿಕಾನ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಸಂಸ್ಥಾಪಕರಾದ ಗೋಪಾಲಸ್ವಾಮಿ ನಾಯಕ್ ಮಾತನಾಡಿ, ಭಾರತ ದೇಶದಲ್ಲಿ ಯುವ ಪ್ರತಿಭೆಗಳು ಹೆಚ್ಚಾಗಿದ್ದಾರೆ.

ಅವರಿಗೆ ಪ್ರೋತ್ಸಾಹ ಬೇಕಿದೆ. ಸ್ವಾಮಿ ವಿವೇಕಾನಂದರ ವಾಣಿಯಂತೆ ನಮ್ಮ ಗುರಿಯನ್ನು ಮುಟ್ಟುವವರೆಗೂ ವಿಶ್ರಾಂತಿಯನ್ನು ಪಡೆಯಬಾರದು. ವಿವೇಕಾನಂದರು ಹೊರ ದೇಶದಲ್ಲಿ ನಮ್ಮ ದೇಶವನ್ನು ಪ್ರತಿನಿಧಿಸುವುದರ ಮೂಲಕ ದೇಶದ ಕೀರ್ತಿಯನ್ನು ಉನ್ನತ ಮಟ್ಟಕ್ಕೆ ತೆಗೆದುಕೊಂಡು ಹೋಗಿದ್ದಾರೆ ಅವರ ಚಿಂತನೆಗಳನ್ನು ನಮ್ಮ ಬದುಕಿನಲ್ಲಿ ಆಳವಡಿಸಿಕೊಳ್ಳಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಸಿಲಿಕಾನ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ವ್ಯವಸ್ಥಾಪಕರಾದ ಸೋಮಶೇಖರ್, ಶಿಕ್ಷಕಿ ನಂದಿನಿ, ವಿದ್ಯಾರ್ಥಿಗಳಾದ ಅನುಪಮ, ಐಶ್ವರ್ಯ,ಮೇಘ,ದೀಪ,ಪವನಕುಮಾರ್, ಹರೀಶ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಜ.15ರಂದು ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ ಆಚರಣೆ ಸಮಾರಂಭವನ್ನು ಇದೇ ಜ.15ರಂದು ಬೆಳಿಗ್ಗೆ 11.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಚಿತ್ರದುರ್ಗ ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಮಹಾಸ್ವಾಮೀಜಿ ದಿವ್ಯಸಾನಿಧ್ಯವಹಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಘನಉಪಸ್ಥಿತಿ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಅಧ್ಯಕ್ಷತೆವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರಭಾಷಾ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಜಿಲ್ಲಾ ಭೋವಿ ಸಮಾಜ ಅಧ್ಯಕ್ಷ ಟಿ.ತಿಪ್ಪೇಸ್ವಾಮಿ, ಕಾರ್ಯದರ್ಶಿ ಹೆಚ್.ಲಕ್ಷ್ಮಣ್ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು ಹಾಗೂ ಭೋವಿ ಸಮಾಜದ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ಹಿರಿಯೂರು ವಾಣಿ ಸಕ್ಕರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹಾಯಕ ಪ್ರಾಧ್ಯಾಪಕರು ಹಾಗೂ ಸಾಹಿತಿ ಪ್ರೊ.ಬಸವರಾಜ ಟಿ.ಬೆಳಗಟ್ಟ ಉಪನ್ಯಾಸ ನೀಡುವರು. ಮೊಳಕಾಲ್ಮುರು ತಾಲ್ಲೂಕು ಸಿದ್ದಯ್ಯನಕೋಟೆ ನುಂಕೇಶ್ ಮತ್ತು ತಂಡದವರು ಗೀತಗಾಯನ ನಡೆಸುವರು.

ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

### ಯುವನಿಧಿ ಯೋಜನೆಗೆ ವಿದ್ಯಾರ್ಥಿಗಳನ್ನು ಕರೆದ್ಯೊಯ್ದ ಕಾಂಗ್ರೆಸ್: ಯುವಮೋರ್ಚಾ ಖಂಡನೆ

» **ಚಳ್ಳಕೆರೆ**

ರಾಜ್ಯ ಸರ್ಕಾರ ತನ್ನ ಗ್ಯಾರಂಟಿಗಳನ್ನು ಜಾರಿಗೆ ಮಾಡುವ ಮುನ್ನ ಹೆಚ್ಚು ಚಿಂತನೆ ನಡೆಸಬೇಕಿದೆ. ಶಿವಮೊಗ್ಗದಲ್ಲಿ ಆರಂಭವಾದ



ಯುವನಿಧಿ ಕಾರ್ಯಕ್ರಮಕ್ಕೆ ಫಲಾನುಭವಿಗಳನ್ನು ಬಿಟ್ಟು ಪದವಿ ವಿದ್ಯಾರ್ಥಿಗಳನ್ನು ಸಾರಿಗೆ ಸಂಸ್ಥೆ ಬಸ್‌ನಲ್ಲಿ ಕರೆದುಕೊಂಡು ಹೋಗಿದ್ದು ಖಂಡನೀಯ ಎಂದು ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಕಾಲುವೇಹಳ್ಳಿ ಪಾಲಯ್ಯ ತಿಳಿಸಿದರು.

ಅವರು, ಪತ್ರಿಕಾ ಹೇಳಿಕೆ ನೀಡಿ, ಪದವಿ ವಿದ್ಯಾರ್ಥಿಗಳಿಗೆ ಈಗಾಗಲೇ ಪರೀಕ್ಷೆ ಆರಂಭವಾಗುವುದರಿಂದ ಅವರು ತಮ್ಮ ವಿದ್ಯಾಭ್ಯಾಸದಲ್ಲಿ ತೊಡಗಿರುತ್ತಾರೆ. ಸರ್ಕಾರ ಅನಗತ್ಯವಾಗಿ ಅವರಿಗೆ ಸಂಬಂಧವಿಲ್ಲದ ಯೋಜನೆಗೆ ಕರೆದುಕೊಂಡು ಹೋಗುವ ಮೂಲಕ ಅವರನ್ನು ಈಗಲೇ ನಿರುದ್ಯೋಗಿಗಳನ್ನಾಗಿ ಮಾಡಲು ಹೊರಟಿದೆ. ಕಾಂಗ್ರೆಸ್ ಪಕ್ಷದ ಎಲ್ಲಾ ಗ್ಯಾರಂಟಿಗಳು ಜನರಿಗೆ ತಲುಪುವಲ್ಲಿ ವಿಫಲವಾಗಿದ್ದು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ತಕ್ಕಪಾಠ ಕಳಿಸುತ್ತಾರೆ ಎಂದಿದ್ಧಾರೆ.

### ಕಾನ್ಸ್‌ಟೇಬಲ್ ಹುದ್ದೆಗಳಿಗೆ ಲಿಖಿತ ಪರೀಕ್ಷೆ

» **ದಾವಣಗೆರೆ**

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್ ಮತ್ತು ಡಿಎಆರ್) 3064 ಹುದ್ದೆಗಳ ಭರ್ತಿಗೆ ಜನವರಿ 28 ರಂದು ಬೆಳಿಗ್ಗೆ 11 ಗಂಟೆಯಿಂದ ಮ.12ರವರೆಗೆ ದಾವಣಗೆರೆ ನಗರದ 40 ಕೇಂದ್ರಗಳಲ್ಲಿ ಲಿಖಿತ ಪರೀಕ್ಷೆ ನಡೆಯಲಿದೆ. ಈ ಲಿಖಿತ ಪರೀಕ್ಷೆಗೆ ಅರ್ಹರಿರುವ ಅಭ್ಯರ್ಥಿಗಳಿಗೆ ಪ್ರವೇಶಪತ್ರದ ಮಾಹಿತಿಯನ್ನು ಬೆಂಗಳೂರಿನ ನೇಮಕಾತಿ ಕಚೇರಿಯಿಂದ ಎಸ್.ಎಂ.ಎಸ್ ಮೂಲಕ ಮಾಹಿತಿಯನ್ನು ನೀಡಲಾಗುತ್ತದೆ ಮತ್ತು ಪ್ರವೇಶ ಪತ್ರದ ಲಿಂಕ್ ಬಳಸಿ ಡೌನ್ ಲೋಡ್ ಮಾಡಿ ಪ್ರತಿಯೊಂದಿಗೆ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಹಾಜರಾಗಬೇಕೆಂದು ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ತಿಳಿಸಿದ್ದಾರೆ.

### ಅನಾಮಧೇಯ ಶವ ಪತ್ತೆ

» **ದಾವಣಗೆರೆ**

ನ್ಯಾಮತಿ ಪೊಲೀಸ್ ಠಾಣೆ ವ್ಯಾಪ್ತಿಯ ಕಂಚಿಕೊಪ್ಪ ಗ್ರಾಮದ ಸಮೀಪ ಅನಾಮಧೇಯ ಪುರುಷ ವ್ಯಕ್ತಿ ಕುಳಿತ ಜಾಗದಲ್ಲಿ ಕುಸಿದು ಮೃತಪಟ್ಟಿರುತ್ತಾನೆ. ಮೃತರು 5.6 ಅಡಿ ಎತ್ತರ, ತೆಳುವಾದ ಮೈಕಟ್ಟು, ಎಣ್ಣೆಕಪ್ಪು ಮೈಬಣ್ಣ, ತಲೆಯಲ್ಲಿ 3 ಇಂಚು ಉದ್ದದ ಬಿಳಿ ಕೂದಲು, ಕೋಲು ಮುಖ ಇರುತ್ತದೆ. ಮೃತರ ವಾರಸುದಾರರಿದ್ದಲ್ಲಿ ನ್ಯಾಮತಿ ಠಾಣೆ ಮೊ.ಸಂ: 9480803264, 9972299234, 8073371548, ದೂ.ಸಂ:08188-265349, ದಾವಣಗೆರೆ ಕಂಟ್ರೋಲ್ ರೂಂ-08192-253100 ಗೆ ಕರೆ ಮಾಡಲು ತಿಳಿಸಲಾಗಿದೆ.

**ಫಾಸ್ಟ್ ನ್ಯೂಸ್**

## ಪಟ್ಟಣದ ಸಮಗ್ರ ಅಭಿವೃದ್ಧಿಯೇ ನನ್ನ ಕನಸಾಗಿದೆ: ಶಾಸಕ



» **ಹೊಸದುರ್ಗ**

ಪಟ್ಟಣದ ಸಮಗ್ರ ಅಭಿವೃದ್ಧಿಯೇ ನನ್ನ ಕನಸಾಗಿದೆ. ಆ ಗುರಿಯೊಂದಿಗೆ ಕೆಲಸ ಮಾಡುತ್ತಿರುವುದಾಗಿ ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.ಪಟ್ಟಣದ ತರೀಕೆರೆ ವಿವಿಪುರ ರಸ್ತೆಯ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಿಂದ ಮಂಡ್ಯ ಹಡಗಲಿ ರಸ್ತೆವರೆಗೆ ಸಂಪರ್ಕ ಕಲ್ಪಿಸುವ 1.50 ಲಕ್ಷ ರೂ ವೆಚ್ಚದ ಕಾಂಕ್ರೀಟ್ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು.ಕಳೆದ ಅವಧಿಯಲ್ಲಿ ಶಾಸಕನಾದ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮೂಲಕ ಪಟ್ಟಣದ ಹೃದಯ ಭಾಗದಲ್ಲಿ ನೂತನ ಸಾರಿಗೆ ಬಸ್ ನಿಲ್ದಾಣ ನಿರ್ಮಾಣ ಮಾಡಿದ್ದೆ. ಇದರ ಮುಂಭಾಗದ ರಸ್ತೆ ಸಂಪೂರ್ಣ ಹದಗೆಟ್ಟಿತ್ತು. ಇಲ್ಲಿನ ಪುರಸಭೆ ಸದಸ್ಯರು, ಸಾರ್ವಜನಿಕರು ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಸಂಪರ್ಕ ರಸ್ತೆ ನಿರ್ಮಾಣಕ್ಕೆ ಬೇಡಿಕೆ ಇಟ್ಟಿದ್ದರು. ಅವರ ಮನವಿಯಂತೆ ವಾಹನ ಸಂಚಾರ ಹಾಗೂ ಸಾರ್ವಜನಿಕ ಓಡಾಟಕ್ಕೆ ಅನುಕೂಲ ಕಲ್ಪಿಸಲು ಉತ್ತಮ ಗುಣಮಟ್ಟದ ರಸ್ತೆ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದ್ದೇನೆ ಎಂದರು.ಬೆಳೆಯುತ್ತಿರುವ ಹೊಸದುರ್ಗ ಪಟ್ಟಣದ ಅಂದವನ್ನು ಹೆಚ್ಚಿಸುವುದು ನಮ್ಮ ಕರ್ತವ್ಯವಾಗಿದೆ. ಲೋಕೋಪಯೋಗಿ ಇಲಾಖೆವತಿಯಿಂದ 1.50 ಲಕ್ಷ ರೂ ವೆಚ್ಚದಲ್ಲಿ ರಸ್ತೆ ನಿರ್ಮಾಣ ಮಾಡಲಾಗುತ್ತದೆ. ಗುತ್ತಿಗೆದಾರರು ಕಾಲಮಿತಿಯೊಳಗೆ ಕೆಲಸ ಪೂರ್ಣಗೊಳಿಸಿ ಸಾರ್ವಜನಿಕರ ಉಪಯೋಗಕ್ಕೆ ಅವಕಾಶ ಮಾಡಿಕೊಡಬೇಕು ಎಂದರು. ಈ ಸಂಧರ್ಬದಲ್ಲಿ ಲೋಕೋಪಯೋಗಿ ಇಲಾಖೆ ಎಇಇ ಮಂಜುನಾಥ್, ಇಂಜಿನಿಯರ್ ತಿಪ್ಪೇಸ್ವಾಮಿ, ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಪುರಸಭಾ ಸದಸ್ಯರಾದ ಶ್ರೀಮತಿ ಸರೋಜಮ್ಮ ಮಲ್ಲೇಶಪ್ಪ,ಸೇರಿದಂತೆ ಪುರಸಭಾ ಸದಸ್ಯರುಗಳು ಸಾರ್ವಜನಿಕರು ಪಕ್ಷದ ಕಾರ್ಯಕರ್ತರುಗಳು ಭಾಗವಹಿಸಿದ್ದರು.

## ಮನೆಯ ಮುದ್ದಿನ ರೂಬಿಗೆ (ನಾಯಿ) ಸೀಮಂತ



» **ನಾಗತಿಹಳ್ಳಿಮಂಜುನಾಥ್**

ಹೊಸದುರ್ಗ:ನಾಯಿ ಎಂದರೆ ಯಾರಿಗೆ ತಾನೇ ಇಷ್ಟವಾಗುವುದಿಲ್ಲ ಮಕ್ಕಳಿಂದ ಹಿಡಿದು ಮುದುಕರವರೆಗೂ ನಾಯಿ ಎಂದರೆ ಎಲ್ಲರಿಗೂ ಪ್ರೀತಿ ಅದರಲ್ಲೂ ಮುದ್ದಿನ ನಾಯಿ ಎಂದರೆ ಇನ್ನೂ ಪ್ರೀತಿ ಹೆಚ್ಚು ರಕ್ಷಿತ್ ಶೆಟ್ಟಿ ಅಭಿಯನದ ಬೆಳ್ಳಿತೆರೆಯಲ್ಲಿ ಸಂಚಲನ ಮೂಡಿಸಿದ '777 ಚಾರ್ಲಿ' ಸಿನಿಮಾದ ಬಳಿಕ ನಾಯಿಗೆ ವಿಶೇಷ ಸ್ಥಾನಮಾನ ದೊರೆತಿದೆ ಎಂದರೆ ತಪ್ಪಾಗಲಾರದು. ಇಂದಿನ ನಾಜೂಕಿನ ಪ್ಯಾಷನ್ ಯುಗದಲ್ಲಿ ಅದೆಷ್ಟೋ ಮನೆಗಳಲ್ಲಿ ನಾಯಿಯೂ ಕೂಡ ಮನೆಯ ಸದಸ್ಯನಾಗಿ ಬಿಟ್ಟಿರುತ್ತದೆ. ಇದಕ್ಕೆ ಪೂರಕವೆಂಬಂತೆ ಹೊಸದುರ್ಗ ತಾಲೂಕಿನ ಮಹಿಳೆಯೊಬ್ಬರು ಕ್ಯೂಟ್ ನಾಯಿಯೊಂದಕ್ಕೆ ಸೀಮಂತ ಮಾಡಿರುವುದು ಇದಕ್ಕೆ ಸಾಕ್ಷಿಯಾಗಿದೆ. ನಾಯಿಗೆ ನೀವು ಕೊಂಚ ಪ್ರೀತಿ ತೋರಿಸಿದರೆ ಸಾಕು, ಅದು ನಿಮಗೆ ಅಪಾರ ಪ್ರೀತಿ ನೀಡುತ್ತದೆ. ನೀವು ಬೇಡ ಅಂದರೂ ಸಾಕಷ್ಟು ಕಾಳಜಿ ತೋರಿಸುತ್ತದೆ. ಮನೆಯಲ್ಲಿ ನಾಯಿ ಸಾಕಿದರೆ, ಮನೆಯವರೊಂದಿಗೆಲ್ಲ ಬೆರೆತು ತಾವು ಕೂಡ ಮನೆಯ ಮಕ್ಕಳಂತೆ ಆಗಿ ಬಿಡುತ್ತದೆ. ಎಷ್ಟೋ ಮಂದಿ ತಾವು ಸಾಕಿರುವ ನಾಯಿಗೆ ಜನ್ಮ ದಿನ ಆಚರಿಸಿ ಕೇಕ್ ಕತ್ತರಿಸುವುದು, ಪ್ರವಾಸ ಕರೆದುಕೊಂಡು ಹೋಗಿ ಸಂತಸ ಪಡುವುದು ಇತ್ತೀಚಿನ ವರ್ಷಗಳಲ್ಲಿ ಸಾಮಾನ್ಯವಾಗಿದೆ.

ಇದೀಗ ಶ್ವಾನ ಪ್ರಿಯರೊಬ್ಬರು ತಮ್ಮ ಮುದ್ದಾದ ನಾಯಿ ಮರಿಗೆ ಸೀಮಂತ ಕಾರ್ಯ ನೆರವೇರಿಸಿದ್ದಾರೆ. ಅರಣ್ಯ ಇಲಾಖೆಯಲ್ಲಿ ವಾಚ್‌ಮನ್ ಆಗಿ ಕಾರ್ಯ ನಿರ್ವಹಿಸುತ್ತಿರುವ ಹೊಸದುರ್ಗ ತಾಲ್ಲೂಕಿನ ಕರ್ಪೂರದಕಟ್ಟೆ ಗ್ರಾಮದ ಅಜಯ್ ಕುಟುಂಬ ತಾವು ಸಾಕಿದ ನಾಯಿ ರೂಬಿಗೆ ಸಾಂಪ್ರದಾಯಿಕವಾಗಿ ಸೀಮಂತ ಕಾರ್ಯವನ್ನು ಸಂಭ್ರಮದಿಂದ ಆಚರಿಸಿದ್ದಾರೆ.

ಮನೆಯ ಸದಸ್ಯರು ಹಾಗೂ ಅಕ್ಕ ಪಕ್ಕದ ಮನೆಯವರು ಹಣ್ಣು, ಸಿಹಿ ತಿನಿಸು ಹೂವು, ಸೀರೆ ಕುಪ್ಪಸವನ್ನು ರೂಬಿಗೆ ಅರ್ಪಿಸಿ, ಆರತಿ ಬೆಳಗಿ ಸೋಬಾನೆ ಪದ ಹಾಡಿ ಸಂಪ್ರದಾಯದಂತೆ ಸೀಮಂತ ಕಾರ್ಯ ನಡೆಸಿದರು.13 ತಿಂಗಳ ಹಿಂದೆ ಬೆಂಗಳೂರಿನಿಂದ ತಂದ ಲ್ಯಾಬ್ರಡಾರ್ ಜಾತಿಯ ನಾಯಿಯನ್ನು ಮನೆಯ ಎಲ್ಲರೂ ಪ್ರೀತಿಯಿಂದ ಸಾಕಿದ್ದೇವೆ. ಮನೆಯ ಒಬ್ಬ ಸದಸ್ಯೆಯಂತೆ ಕಾಣುತ್ತಿದ್ದೇವೆ. ರೂಬಿ ಈಗ 50 ದಿನಗಳ ಗರ್ಭಿಣಿಯಾಗಿದ್ದು, ಹೆಣ್ಣು ಮಕ್ಕಳ ಆಸೆಯಂತೆ ಸೀಮಂತ ಕಾರ್ಯ ಮಾಡಿದ್ದೇವೆ ಎನ್ನುತ್ತಾರೆ ಕುಟುಂಬದ ಸದಸ್ಯರುಗಳು.

# ಟೀಕೆಗಳಿಗೆ ಗಮನ ನೀಡದೆ ಗುರಿ ಸಾಧಿಸಿ

» **ಚಿತ್ರದುರ್ಗ**

ನಮ್ಮ ಹಿಂದೆ ನಡೆಯುವ ಟೀಕೆ, ಟಿಪ್ಪಣಿಗಳಿಗೆ ಗಮನವನ್ನು ನೀಡದೆ ಬದುಕಿನ ಗುರಿಯನ್ನು ಮುಟ್ಟುವ ಕಾರ್ಯವನ್ನು ಮಾಡಬೇಕಿದೆ ಎಂದು ಸಾಹಿತಿ, ಶರಣ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಹುರಳಿ ಬಸವರಾಜು ಮಕ್ಕಳಿಗೆ ಕರೆ ನೀಡಿದರು.

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ನಗರದ ವಿದ್ಯಾ ಭಾರತಿ ಜ್ಞಾನ ಮಂದಿರ ಇವರ ಸಂಯುಕ್ತಾಶಯದಲ್ಲಿ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.



ಜನವರಿಯಲ್ಲಿ ಸಾಲು ಸಾಲು ಹಬ್ಬಗಳು ಬರುತ್ತವೆ ಇದರಲ್ಲಿ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆಯೂ ಸಹಾ ಸೇರಿದೆ. ಇದು ನಮಗೆಲ್ಲಾ ಹಬ್ಬದ ದಿನ ಇದ್ದಂತೆ, ಸ್ವಾಮಿ ವಿವೇಕಾನಂದರ ವಾಣಿಯಂತೆ ಏಳಿ ಏದ್ದೇಳಿ ಗುರಿ ಮುಟ್ಟುವ ತನಕ ನಿಲ್ಲದಿರಿ ಎಂಬಂತೆ ಯುವ ಜನತೆ ಹೋರಾಟವನ್ನು ಮಾಡಬೇಕಿದೆ. ನಮ್ಮ ದೇಶ ಈಗ ಯುವಜನತೆಯ ಕೈಯಲ್ಲಿ ಇದೆ ಅವರು ಇದನ್ನು ಮುನ್ನೆಡಸಬೇಕಿದೆ ಎಂದರು.

ಇಂದಿನ ಯುವ ಜನತೆ ಹಿರಿಯ ಮಾತನ್ನು ಕಡೆಗಣಿಸುತ್ತಿದ್ದಾರೆ. ಅವರ ಮಾತು ಎಂದರೆ ನಿರ್ಲಕ್ಷ ಮಾಡುತ್ತಿದ್ದಾರೆ. ಹಿರಿಯರಅನುಭವನ್ನುಕಡೆಗಣಿಸುತ್ತಿದ್ದಾರೆ. ಇಂದಿನ ದಿನಮಾನದಲ್ಲಿ ಆಧುನಿಕ ತಂತ್ರಜ್ಞಾನದಿಂದಾಗಿ ನಮ್ಮ ಯುವ ಜನತೆ ದಾರಿಯನ್ನು ತಪ್ಪುತ್ತಿದೆ ಎಂಬ ಭಾವನೆ ಮೂಡುತ್ತಿದೆ ಎಂದು ತಿಳಿಸಿದರು.

ಯುವ ಜನತೆ ಮನಸ್ಸು ಮಾಡಿದರೆ ಏನನ್ನಾದರೂ ಸಾಧನೆ ಮಾಡುತ್ತಾರೆ. ಅದರೆ ಯುವ ಜನತೆ ಏನು ಮಾಡಿದರು ಸಹಾ ತಪ್ಪನ್ನು ಕಂಡು ಹಿಡಿಯುತ್ತಾರೆ, ಈ ಹಿನ್ನಲೆಯಲ್ಲಿ ನಮ್ಮ ಹಿಂದೆ ಟೀಕೆ, ಟಿಪ್ಪಣಿಯನ್ನು ಮಾಡುವವರ ಬಗ್ಗೆ ಗಮನವನ್ನು ನೀಡದೇ ಬದುಕಿನ ಗುರಿಯನ್ನು ಮುಟ್ಟಿವಂತ ತಮ್ಮ ಗಮನ ನೀಡಬೇಕಿದ ಸ್ವಾಮಿ ವಿವೇಕಾನಂದರೂ ಸಹಾ ಇದ್ದನ್ನೇ ಹೇಳಿದ್ದಾರೆ ಅವರಂತೆ ನಡೆಯಬೇಕಿದೆ ಎಂದರು.

ವಿವೇಕಾನಂದರು ಬಾಲ್ಯದಲ್ಲಿಯೇ ಉತ್ತಮ ಜ್ಞಾನವನ್ನು ಸಂಪಾದಿಸುವುದರ ಮೂಲಕ ತಮ್ಮ ಮುಂದಿನ ಗುರಿಯನ್ನು ತೋರಿಸಿದ್ದರು, ಬೇರೆಯವರು ಹೇಳಿದ್ದನ್ನು ಒಪ್ಪಿಕೊಳ್ಳದೇ ಅದನ್ನು ಪ್ರಶ್ನಿಸುವ ಮನೋಭಾವವನ್ನು ಬೆಳಸಿಕೊಂಡಿದ್ದರು, ಇದು ಅವರನ್ನು ದೊಡ್ಡ ಮನ್ಯುಷ್ಯರನ್ನಾಗಿ ಮಾಡಿತು. ಬಾಲ್ಯದಲ್ಲಿಯೇ ಭಗವಂತನ ಬಗ್ಗೆ ಪ್ರಶ್ನಿಸಿದ್ದರು. ನಂತರ ರಾಮಕೃಷ್ಣ ಪರಹಂಸರಿಂದ ಇದಕ್ಕೆ ಉತ್ತರವನ್ನು ಪಡೆದುಕೊಂಡರು ಎಂದು ಹೇಳಿದರು.

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ನ ಜಿಲ್ಲಾಧ್ಯಕ್ಷರಾದ ನಾಗರಾಜ್ ಸಂಗಂ ಮಾತನಾಡಿ, ಇಂದಿನ ಯುವ ಪೀಳೀಗೆ ದೇಶವನ್ನು ಕಟ್ಟುವ ಕೆಲಸವನ್ನು ಮಾಡಬೇಕಿದೆ. ವಿಶ್ವಕ್ಕೆ ವಿವೇಕಾನಂದರ ಮಾದರಿಯಾಗಿದ್ದಾರೆ. ನಮ್ಮ ಪರಿಷತ್ ವತಿಯಿಂದ ರಾಜ್ಯದ 32 ಶೈಕ್ಷಣಿಕ ಜಿಲ್ಲೆಗಳಲ್ಲಿಯೂ ಸಹಾ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಆಚರಿಸಲಾಗುತ್ತಿದೆ. ಪ್ರತಿಯೊಬ್ಬರು ಸಹಾ ವಿವೇಕಾನಂದರಂತೆಆಗಬೇಕಿದೆ.ಇದರಿಂದ ದೇಶ ಪ್ರಗತಿಯನ್ನು ಕಾಣಲಿದೆ. ನಾವುಗಳು ಆಶಾದಾಯಕರಾಗಿರಬೇಕೇ ಹೊರೆತು ನಿರಾಶದಾಯುಕರಾಗಬಾರದೆಂದು ತಿಳಿಸಿದರು.

ವಿದ್ಯಾ ಭಾರತಿ ಜ್ಞಾನ ಮಂದಿರದ ಮುಖ್ಯ ಶಿಕ್ಷಕಿ ಹಸೀನ, ಶಂಕರಪ್ಪ, ಕಿರಣ ಶಂಕರ್, ರಂಗಪ್ಪ, ಕೆಂಚಪ್ಪ, ಜ್ಞಾನ ಮೂರ್ತಿ ಸೇರಿದಂತೆ ಇತರರು ಭಾಗವಹಿಸಿದ್ದರು.

### ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ವತಿಯಿಂದ

## ವಿವೇಕಾನಂದ ಜಯಂತಿ, ಪದಗ್ರಹಣ ಸಮಾರಂಭ

» **ದಾವಣಗೆರೆ**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ವತಿಯಿಂದ ಸ್ವಾಮಿ ವಿವೇಕಾನಂದ ಜಯಂತಿ ಹಾಗೂ ಪದಗ್ರಹಣ ಸಮಾರಂಭವನ್ನು ವನಿತಾ ಸಮಾಜ ಆಚರಿಸಲಾಯಿತು ಸಾನಿಧ್ಯವನ್ನು ಶ್ರೀ ಷ ಬ್ರ ಓಂಕಾರ ಶಿವಾಚಾರ್ಯ ಮಹಾ ಸ್ವಾಮೀಜಿ ರವರು ಪುರ ವರ್ಗ ಹಿರಿಯ ಮಠ ಶ್ರೀ ಕ್ಷೇತ್ರ ಅವರಗೊಳ್ಳ ವಹಿಸಿದ್ದರು ಉದ್ಘಾಟನೆಯನ್ನು ಬಂಗ್ಲೆ ಮಲ್ಲಿಕಾರ್ಜುನ್ ಸಂಸ್ಥಾಪಕ ರಾಜ್ಯಾಧ್ಯಕ್ಷರು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಬೆಂಗಳೂರು ಇವರು ನೆರೆವೇರಿಸಿದರು ಸ್ವಾಮಿ ವಿವೇಕಾನಂದ ಭಾವಚಿತ್ರಕ್ಕೆ ರವರು ಪುಷ್ಪಾರ್ಚನೆ ಡಾ. ಬಿ ವಾಸುದೇವ್ ರಾಜ್ಯ ಉಪಾಧ್ಯಕ್ಷರು ಹಾಗೂ ವಿಷ್ಮಯವಾಣಿ ಕನ್ನಡ ದಿನಪತ್ರಿಕೆ ಸಂಪಾದಕರು ಇವರು ಮಾಡಿದರು ಡಿ. ಗಿರೀಶ ಚನ್ನಗಿರಿ ತಾಲೂಕು ಅಧ್ಯಕ್ಷರು ಹಾಗೂ ಜಿಲ್ಲಾ ಗೌರವಾಧ್ಯಕ್ಷರು ವರದಿಗಾರರು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ವಹಿಸಿದ್ದರು ಮುಖ್ಯ ಅತಿಥಿಗಳು ಶ್ರೀಮತಿ ಮಂಜುಳಾ ಬಂಗ್ಲೆ ಮಲ್ಲಿಕಾರ್ಜುನ್ ರಾಜ್ಯ ಖಜಾಂಚಿ



ಈ ಸಂದರ್ಭದಲ್ಲಿ ಎಂ ಮನು ಜಿಲ್ಲಾಧ್ಯಕ್ಷರು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ, ಚಿಕ್ಕಪ್ಪ ದಾವಣಗೆರೆ ಉಸ್ತುವಾರಿ ಹಾಗೂ ತಾಲೂಕು ಅಧ್ಯಕ್ಷರು ಹೊಳಲ್ಕೆರೆ , ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುಕನ್ಯ ಜಿಲ್ಲಾ ಖಜಾಂಚಿ ಕೊಂಡಜ್ಜಿ ರಾಜಶೇಖರ್ ಈ ಸಂದರ್ಭದಲ್ಲಿ ಸಾಂಸ್ಕೃತಿಕ ಸಮಿತಿ ಅಧ್ಯಕ್ಷರಾದ ಮಾಲಾ ಹನುಮಂತಪ್ಪ ಜಂಟಿ ಕಾರ್ಯದರ್ಶಿ ಸಹನಾ ನಾಯಕ್ ಜಿಲ್ಲಾ ಉಪಾಧ್ಯಕ್ಷರಾದ ವೈ ಭಾಗ್ಯ ದೇವಿ ಪ್ರಕಾಶ್ ರಫೀಕ್ ಅಹಮದ್ ಬಿಕೆ ದೀಪ ಪೂರ್ವಾಚಾರಿ ಶಿವಮೊಗ್ಗ ಜಿಲ್ಲಾಧ್ಯಕ್ಷರಾದ ರಮೇಶ್ ಚಿಕ್ಕಮರಡಿ ರವಿ ನಾಯಕ್ ಆಂತೋನಿ ಪ್ರಕಾಶ್ ಕೋಟ್ಯಾಳ ಸಿದ್ದೇಶ್ ಇನ್ನಿತರರು ಉಪಸಿತರಿದ್ದರು



**ಹಿರಿಯೂರಿನ ಪೂರ್ಣಪ್ರಜ್ಞ ಶಾಲೆಯಲ್ಲಿ ಸ್ವಾಮಿ ವಿವೇಕಾನಂದ ಜಯಂತಿಯನ್ನು ಆಚರಿಸಲಾಯಿತು. ವಿದ್ಯಾರ್ಥಿಗಳಾದ ದೇವರಾಜ್ ಮತ್ತು ಮಹಮದ್ ಆಜಾನ್ ಇವರು ಸ್ವಾಮಿ ವಿವೇಕಾನಂದ ಹಾಗೂ ಸಂಜಯ್ ರಾಮಕೃಷ್ಣ ಪರಮಹಂಸರ ವೇಶ ಭೂಷಣಗಳನ್ನು ಧರಿಸಿ ಕಂಗೊಳಿಸಿದರು. ಶಾಲಾ ಸಮಿತಿಯ ಅಧ್ಯಕ್ಷರಾದ ಟಿ ಸಂಜಯ್ ಹಾಗೂ ಕಾರ್ಯದರ್ಶಿ ಪಿ.ಎಂ ನಯೀಮುದ್ದೀನ್ ಮುಖ್ಯ ಶಿಕ್ಷಕರಾದ ಎಂ ಕಮಲಾಕ್ಷಮ್ಮ ಮತ್ತು ಶಿಕ್ಷಕ ವೃಂದದವರು ವಿದ್ಯಾರ್ಥಿಗಳಿಗೆ ಅಭಿನಂದಿಸಿದರು**

## ಎಬಿವಿಪಿಯಿಂದ ಸ್ವಾಮಿ ವಿವೇಕಾನಂದ ಜಯಂತಿ

» **ಹಿರಿಯೂರು**

ಸ್ವಾಮಿ ವಿವೇಕಾನಂದರ 161 ನೇ ಜಯಂತಿ ಪ್ರಯುಕ್ತ ಹಿರಿಯೂರಿನಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ವತಿಯಿಂದ ಶೋಭಯಾತ್ರೆಯನ್ನು ಅದ್ದೂರಿಯಾಗಿ ನಡೆಸಲಾಯಿತು.ನಗರದ ಪ್ರಮುಖ ಬೀದಿಗಳಲ್ಲಿ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಶೋಭಯಾತ್ರೆಯಲ್ಲಿ ಭಾಗವಹಿಸಿದ್ದರು.ತಾಲ್ಲೂಕು ಅಧ್ಯಕ್ಷರು ಮಂಜೇಶ್,ತಾಲ್ಲೂಕು ಸಂಚಲಕ್ ರಾಮು,ನಗರ ಕಾರ್ಯದರ್ಶಿ ಸುದೀಪ್,ನಗರ ಸಹಾ ಕಾರ್ಯದರ್ಶಿ ಅಂಕಿತಾ, ಯೋಗೇಶ್,ಶ್ರೀದೇವಿ,ಜಾನು, ಪ್ರಿಯದರ್ಶಿನಿ, ಮೇಘ,ಪಲ್ಲವಿ ಶ್ರೀನಿವಾಸ್, ಸಂಜಯ್,ಮಧು, ಸರ್ವೇಶ್, ಹರ್ಷವರ್ಧನ್, ಸೇರಿದಂತೆ ಅನೇಕ ಎಬಿವಿಪಿ ಕಾರ್ಯಕರ್ತರು ಮತ್ತು ವಿದ್ಯಾರ್ಥಿಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು



## ದೊಡ್ಡಚೆಲ್ಲೂರು ಪ್ರೌಢಶಾಲೆಯಲ್ಲಿ ವಿವೇಕಾನಂದರ ಜಯಂತಿ ಆಚರಣೆ



» **ಪರಶುರಾಂಪುರ**

ವಿದ್ಯಾರ್ಥಿಗಳು ಸ್ವಾಮಿ ವಿವೇಕಾನಂದರ ಸಂದೇಶಗಳನ್ನು ಅರಿಯುವ ಮೂಲಕ ಜೀವನದಲ್ಲಿ ಯಶಸ್ಸು ಮತ್ತು ಸಾರ್ಥಕತೆ ಪಡೆದುಕೊಳ್ಳಲು ಮುಖ್ಯ ಶಿಕ್ಷಕ ಹನುಮಂತರಾಯಪ್ಪ ತಿಳಿಸಿದರು.ಸಮೀಪದ ದೊಡ್ಡಚೆಲ್ಲೂರು ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಶುಕ್ರವಾರ ವಿವೇಕಾನಂದರ ಜಯಂತಿ ಪ್ರಯುಕ್ತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿ ದರು. ಈ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿ ಪ್ರಸನ್ನ ಕುಮಾರ್ ಶಿಕ್ಷಕರು,ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

### ತಾಲ್ಲೂಕು ಮಟ್ಟದ ಛಾಯಾಗ್ರಾಹಕರ ಚಿಂತನಾ, ಮಂಥನ ಸಭೆ

# ಸರ್ಕಾರದಿಂದ ಸೌಲಭ್ಯ ಪಡೆಯುವತ್ತ ದಿಟ್ಟಹೆಜ್ಜೆ ಇಡೋಣ

» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ಛಾಯಾಗ್ರಹಣ ಸಾರ್ವಜನಿಕರಿಂದ ವಿಶೇಷ ಗೌರವವನ್ನು ಪಡೆಯುತ್ತಿದೆ. ಪ್ರತಿಯೊಬ್ಬ ..ಛಾಯಾಚಿತ್ರಗಾರನೂ ಸಹ ಶ್ರದ್ದೆಯಿಂದ ಕಾರ್ಯನಿರ್ವಹಿಸುತ್ತಿದ್ದು, ಗ್ರಾಹಕರ ಸೇವೆಯನ್ನು ಪ್ರಾಮಾಣಿಕವಾಗಿ ಮಾಡುತ್ತಿದ್ದು, ಇದು ..ಛಾಯಾಗ್ರಹಣ ಕ್ಷೇತ್ರದ ಬೆಳವಣಿಗೆಗೆ ಸಹಕಾರಿಯಾಗಿದೆ. ಇದರ ಜೊತೆಯಲ್ಲಿ ಸರ್ಕಾರಿ ಸೌಲಭ್ಯ ಪಡೆಯಲು ನಾವೆಲ್ಲರೂ ಒಗ್ಗೂಡಬೇಕು ಎಂದು ಶಿವಮೊಗ್ಗ ಜಿಲ್ಲಾ ಛಾಯಾಚಿತ್ರಗಾರ ಸಂಘದ ಅಧ್ಯಕ್ಷ ಕೆ.ಟಿ.ಶ್ರೀನಿವಾಸ್ ತಿಳಿಸಿದರು.

ಅವರು, ನಗರದ ಚಿತ್ರದುರ್ಗ ರಸ್ತೆಯ ವಿಠಲನಗರದ ಶ್ರೀಬ್ರಹ್ಮಶ್ರೀನಾರಾಯಣಗುರುಗಳ ಸಮುದಾಯ ಭವನದಲ್ಲಿ ತಾಲ್ಲೂಕು ..ಛಾಯಾಚಿತ್ರಗಾರರ ಚಿಂತನ, ಮಂಥನ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.



ತಾಲ್ಲೂಕು ಗೌರವಾಧ್ಯಕ್ಷ ಪಿ.ರವೀಂದ್ರನಾಥ ಮಾತನಾಡಿ, ಕಳೆದ 20 ವರ್ಷಗಳಿಂದ ಚಳ್ಳಕೆರೆ ನಗರದಲ್ಲಿ ಕೇವಲ ಬೆರಳಿಯಷ್ಟು ಛಾಯಾಚಿತ್ರಗಾರರು ಇದ್ದರು. ಅಲ್ಲೊಂದು ಇಲ್ಲೊಂದು ಸ್ಟುಡಿಯೋಗಳಿದ್ದವು. ಆದರೆ, ಈಗ ಚಳ್ಳಕೆರೆ ನಗರದ ಎಲ್ಲಾ ರಸ್ತೆ ಹಾಗೂ ತಾಲ್ಲೂಕಿನ ಎಲ್ಲಾ ಪ್ರಮುಖ ಹಳ್ಳಿಗಳಲ್ಲಿ ಛಾಯಾಗ್ರಾಹಕರು ತಮ್ಮದೇಯಾದ ಬದುಕು ರೂಪಿಸಿಕೊಂಡಿದ್ದಾರೆ. ಇಂದಿನ ತಾಂತ್ರಿಕತೆ ಛಾಯಾಗ್ರಹಣ ಬೆಳವಣಿಗೆಗೆ ಪ್ರೋತ್ಸಾಹದಾಯಕವಾಗಿದೆ ಎಂದರು.

ತಾಲ್ಲೂಕು ಅಧ್ಯಕ್ಷ ನೇತಾಜಿ ಪ್ರಸನ್ನ ಮಾತನಾಡಿ, ರಾಜ್ಯ ಸರ್ಕಾರ ಅನೇಕ ಕ್ಷೇತ್ರಗಳಲ್ಲಿ ವಿಶೇಷ ಸೌಲಭ್ಯಗಳನ್ನು ನೀಡುತ್ತಾ ಬಂದಿದೆ. ಆದರೆ, ಕಳೆದ ಹಲವಾರು ವರ್ಷಗಳಿಂದ ರಾಜ್ಯಮಟ್ಟದಲ್ಲಿ ಛಾಯಾಗ್ರಾಹಕರು ಭೇಡಿಕೆ ಇಟ್ಟರೂ ಈಡೇರಿಸಿಲ್ಲ. ಆದ್ದರಿಂದ ಸರ್ಕಾರದಿಂದ ಸೂಕ್ತ ನೆರವನ್ನು ಪಡೆದರೆ ನಮ್ಮ ಕ್ಷೇತ್ರ ಇನ್ನೂ ಹೆಚ್ಚು ಅಭಿವೃದ್ಧಿ ಕಾಣಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ನಾವೆಲ್ಲರೂ ಚಿಂತನೆ ನಡೆಸಬೇಕು ಎಂದರು.

ಉಪಾಧ್ಯಕ್ಷ ತಿರುಮಲಕುಮಾರ್, ಕಾರ್ಯದರ್ಶಿ ಶಾಂತಲಾಚಂದ್ರಶೇಖರ್, ಸಹಕಾರ್ಯದರ್ಶಿ ರಘು, ಸಂಘಟನಾ ಕಾರ್ಯದರ್ಶಿ ಅಜಯ್, ನಿರ್ದೇಶಕರಾದ ಆರ್.ಅಶೋಕ್‌ಭಾನು, ಮೃತ್ಯುಂಜಯ, ಶ್ರೀನಿವಾಸಲು, ತಿಪ್ಪೇಶ್, ಕೋಟ್ರೇಶ್, ಶಂಕರಚೌಧರಿ, ಉಮೇಶ್, ವೆಂಕಟೇಶ್, ಓಬಣ್ಣ, ದೇವರಾಜು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಶ್ರೀವಾಲ್ಮೀಕಿ ಜಾತ್ರೆ ಹಿನ್ನೆಲೆ: ಇಂದು ವಾಲ್ಮೀಕಿ ಕಲ್ಯಾಣಮಂಟಪದಲ್ಲಿ ಪೂರ್ವಭಾವಿ ಸಭೆ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ದಾವಣಗೆರೆ ಜಿಲ್ಲೆ ರಾಜನಹಳ್ಳಿ ಶ್ರೀವಾಲ್ಮೀಕಿ ಗುರುಪೀಠದಲ್ಲಿ ಶ್ರೀಪ್ರಸನ್ನಾನಂದಸ್ವಾಮೀಜಿಯವರ ದಿವ್ಯಸಾನಿಧ್ಯದಲ್ಲಿ ಫೆ.8 ಮತ್ತು 9 ಎರಡು ದಿನಗಳ ಕಾಲ ಶ್ರೀವಾಲ್ಮೀಕಿ ಜಾತ್ರೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿಯ ಸದಸ್ಯರಲ್ಲಿ ಒಬ್ಬರಾದ ಪಿ.ತಿಪ್ಪೇಸ್ವಾಮಿ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ವಾಲ್ಮೀಕಿ ಗುರುಪೀಠದಲ್ಲಿ ನಡೆಯುವ ವಾಲ್ಮೀಕಿ ಜಾತ್ರೆ ರಾಜ್ಯಮಟ್ಟದಲ್ಲಿ ಖ್ಯಾತಿಯಾಗಿದ್ದು, ಸಮುದಾಯದ ಚುನಾಯಿತ ಎಲ್ಲಾ ಜನಪ್ರತಿನಿಧಿಗಳು ರಾಜ್ಯದ ಮುಖ್ಯಮಂತ್ರಿಗಳು, ಮಂತ್ರಿಗಳು ಈ ಜಾತ್ರೆಯಲ್ಲಿ ಭಾಗವಹಿಸುತ್ತಾರೆ. ಕಳೆದ ಹಲವಾರು ವರ್ಷಗಳಿಂದ ವಾಲ್ಮೀಕಿ ಜಾತ್ರೆ ಯಶಸ್ವಿಯಾಗಿ ನಡೆಯುತ್ತಾ ಬಂದಿದೆ. ಶ್ರೀವಾಲ್ಮೀಕಿ ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ಜ.13ರ ಶನಿವಾರ ಬೆಳಗ್ಗೆ 11ಗಂಟೆಗೆ ನಗರದ ಶ್ರೀವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಪೂರ್ವಭಾವಿ ಸಭೆಯನ್ನು ಕರೆದಿದ್ದು, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಪೂರ್ವಭಾವಿ ಸಭೆಯನ್ನು ಉದ್ಘಾಟಿಸುವರು. ಶ್ರೀಪ್ರಸನ್ನಾನಂದಸ್ವಾಮೀಜಿ ಸಭೆಯಲ್ಲಿ ಭಾಗವಹಿಸಿ ಮಾರ್ಗದರ್ಶನ ನೀಡುವರು. ವಾಲ್ಮೀಕಿ ಕಲ್ಯಾಣ ಮಂಟಪ ಟ್ರಸ್ಟ್ ಮತ್ತು ನಾಯಕ ಸಮಾಜದ ಅಧ್ಯಕ್ಷರಾದ ಮಲ್ಲಪ್ಪನಾಯಕ, ದುಗ್ಗಾವರ ತಿಪ್ಪೇಸ್ವಾಮಿ, ಚನ್ನಂಗಿರಂಗಸ್ವಾಮಿ, ಸಿ.ಟಿ.ವೀರೇಶ್, ಬಾಳೆಮಂಡಿರಾಮದಾಸ್, ಎಲ್‌ಐಸಿ ತಿಪ್ಪೇಸ್ವಾಮಿ, ಪಿ.ತಿಪ್ಪೇಸ್ವಾಮಿ(ಪಿಟಿ), ಜಿ.ಟಿ.ವೀರಭದ್ರಸ್ವಾಮಿ ಹಾಗೂ ನಾಯಕ ಸಮುದಾಯದ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಜನಾಂಗದ ಮುಖಂಡರು ಪೂರ್ವಸಭೆಯಲ್ಲಿ ಭಾಗವಹಿಸಲು ಮನವಿ ಮಾಡಿದೆ.

### ಜೈ ಶ್ರೀರಾಮ್ ಬಳಗದಿಂದ ಸ್ವಾಮಿ ವಿವೇಕಾನಂದ ಜಯಂತಿ ಆಚರಣೆ



» **ಚಿತ್ರದುರ್ಗ**

ಮದಕರಿನಾಯಕ ವೃತ್ತದಲ್ಲಿ ಜೈ ಶ್ರೀರಾಮ್ ಬಳಗದಿಂದ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಶುಕ್ರವಾರ ಆಚರಿಸಲಾಯಿತು. ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದ ಜೈ ಶ್ರೀರಾಮ್ ಬಳಗದವರು ಸಿಹಿ ಹಂಚಿದರು.ಜೈ ಶ್ರೀರಾಮ್ ಬಳಗದ ಅಧ್ಯಕ್ಷ ಮಂಜುನಾಥ್ ಮಾತನಾಡಿ ಭಾರತದ ಸಂಸ್ಕೃತಿಯನ್ನು ಪಾಶ್ಚಿಮಾತ್ಯ ದೇಶಗಳಲ್ಲಿ ಹರಡಿದ ಸ್ವಾಮಿ ವಿವೇಕಾನಂದರು ಏಳಿ ಎದ್ದೇಳಿ ಗುರಿ ಮುಟ್ಟುವತನಕ ನಿಲ್ಲದಿರಿ ಎನ್ನುವ ಸಂದೇಶವನ್ನು ಯುವ ಪೀಳಿಗೆಗೆ ನೀಡಿದ್ದಾರೆ. ವೀರ ಸನ್ಯಾಸಿಯಾಗಿದ್ದ ಸ್ವಾಮಿ ವಿವೇಕಾನಂದರ ಚಿಂತನೆಗಳನ್ನು ಇಂದಿನ ಯುವ ಜನಾಂಗ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.ಎ.ಪಿ.ರವಿ, ಪ್ರದೀಪ್‌ಕುಮಾರ್, ವಿರುಪಾಕ್ಷ, ಮೋಹನ್, ಸಂಜಯ್, ವಿನಯ್, ಪ್ರದೀಪ್, ಸುರೇಶ್, ದಿನೇಶ್, ಮಲ್ಲೇಗೌಡ್ರು, ಶ್ರೀಧರ್, ಆನಂದ್, ಮಾರುತಿ, ತಿಪ್ಪೇಶ್, ಮೋಹನ್, ಬಸವರಾಜ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಜೈನ್ ವಿದ್ಯಾಲಯದಲ್ಲಿ ರಾಷ್ಟ್ರೀಯ ಯುವ ದಿನಾಚರಣೆ



» **ದಾವಣಗೆರೆ**

ಶಾಮನೂರು ಬಳಿ ಇರುವ ಜೈನ್ ವಿದ್ಯಾಲಯ (ಅಃಖಇ) ಶಾಲೆಯಲ್ಲಿ ಸ್ವಾಮಿ ವಿವೇಕಾನಂದ ಜಯಂತಿ ಅಂಗವಾಗಿ ರಾಷ್ಟ್ರೀಯ ಯುವ ದಿನಾಚರಣೆ ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಸ್ವಾಮಿ ವಿವೇಕಾನಂದರ ಜೀವನ ಚರಿತ್ರೆಯ ಬಗ್ಗೆ ಉಪನ್ಯಾಸ, ಯುವ ಜಾಗೃತಿ, ಅವರ ಬದುಕು ಭಾಷಣ, ಚಿಂತನೆಗಳ ಕುರಿತು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಪ್ರಾಂಶುಪಾಲರಾದ ಅನಿತಾ ರಜಪೂತ, ಮುಖ್ಯ ಶಿಕ್ಷಕರಾದ ಅಕ್ಕಮಹಾದೇವಿ, ಶಿಲ್ಪಾ, ಸಂಜೀವ್ ಮತ್ತು ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಇನ್ನರ್‌ವೀಲ್ ಕ್ಲಬ್‌ಗೆ ಸೆಂಚುರಿ ಸಂಭ್ರಮ

» **ಚಿತ್ರದುರ್ಗ**

ಮಾರ್ಗರೇಟ್‌ರವರು 1924 ರಲ್ಲಿ ಸ್ಥಾಪಿಸಿದ ಇನ್ನರ್‌ವೀಲ್ ಕ್ಲಬ್‌ಗೆ ನೂರು ವರ್ಷಗಳಾಗಿರುವುದರಿಂದ ರೋಟರಿ ಬಾಲ ಭವನದಲ್ಲಿ ಇನ್ನರ್‌ವೀಲ್ ಕ್ಲಬ್ ಚಿತ್ರದುರ್ಗ ವತಿಯಿಂದ ನೂರನೆ ವರ್ಷದ ದಿನಾಚರಣೆ ಹಾಗೂ ಮಕರ ಸಂಕ್ರಾಂತಿ ಸಂಭ್ರಮವನ್ನು ಗುರುವಾರ ಆಚರಿಸಲಾಯಿತು.




ನಗರಸಭೆ ಪೌರಾಯುಕ್ತರಾದ ರೇಣುಕ ಎಂ. ಇನ್ನರ್‌ವೀಲ್ ಕ್ಲಬ್‌ನ ನೂರನೆ ವರ್ಷದ ದಿನಾಚರಣೆ ಉದ್ಘಾಟಿಸಿ ಮಾತನಾಡುತ್ತ ಸ್ನೇಹ ಮತ್ತು ಸೇವಾ ಗುಣ ಹೊಂದಿರುವ ಇನ್ನರ್‌ವೀಲ್ ಕ್ಲಬ್ ಅನೇಕ ಸಮಾಜಮುಖಿ ಕೆಲಸಗಳನ್ನು ಮಾಡಿಕೊಂಡು ಬರುತ್ತಿರುವುದು ಹೆಮ್ಮೆಯ ಸಂಗತಿ. ಆಧುನಿಕ ಯುಗದಲ್ಲಿ ಏಕಾಂಗಿತನ ಕಾಡುತ್ತಿರುವ ಇಂದಿನ ಸಂದರ್ಭದಲ್ಲಿ ಇನ್ನರ್‌ವೀಲ್ ಕ್ಲಬ್ ಮೂಲಕ ಮಹಿಳೆಯರೆಲ್ಲಾ ಒಂದೆಡೆ ಸೇರಿ ಸಂಭ್ರಮಿಸುತ್ತಿರುವುದನ್ನು ನೋಡಿದರೆ ಮನಸ್ಸಿಗೆ ಖುಷಿ ನೀಡುತ್ತದೆ ಎಂದರು.

ಮಹಿಳೆಯರು ಸಂಘಟಿತರಾಗಬೇಕು. ಒತ್ತಡಗಳ ನಡುವೆ ಇಂತಹ ಕಾರ್ಯಕ್ರಮಗಳ ಮೂಲಕ ಮನಸ್ಸಿಗೆ ಮನೋರಂಜನೆ ಪಡೆದುಕೊಳ್ಳಬಹುದು. ಮುಂದಿನ ದಿನಗಳಲ್ಲಿ ನಗರಸಭೆಯಿಂದ ಸಹಕಾರ ನೀಡುವುದಾಗಿ ಭರವಸೆ ಕೊಟ್ಟರು.ಇನ್ನರ್‌ವೀಲ್ ಕ್ಲಬ್ ಚಿತ್ರದುರ್ಗ ಅಧ್ಯಕ್ಷೆ ಶ್ರೀಮತಿ ಮೋಕ್ಷರುದ್ರಸ್ವಾಮಿ ಮಾತನಾಡಿ 1924 ರಲ್ಲಿ ಕೇವಲ ಐವರು ಸದಸ್ಯರುಗಳಿಂದ ಹುಟ್ಟಿಕೊಂಡ ಇನ್ನರ್‌ವೀಲ್ ಕ್ಲಬ್‌ನಲ್ಲಿ ಈಗ ಒಂದು ಲಕ್ಷದ 24 ಸಾವಿರ ಮೆಂಬರ್‌ಗಳಿದ್ದು, 108 ದೇಶಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿದೆ. ಅನೇಕ ಸರ್ಕಾರಿ ಶಾಲೆಗಳನ್ನು ದತ್ತು ತೆಗೆದುಕೊಂಡು ಹ್ಯಾಪಿ ಸ್ಕೂಲ್‌ಗಳನ್ನಾಗಿ ಮಾಡಲಾಗಿದೆ. ಮಕ್ಕಳಿಗೆ ಸಮವಸ್ತ್ರ, ಶುದ್ದ ಕುಡಿಯುವ ನೀರು ಪೂರೈಸಿದ್ದೇವೆ. ಇನ್ನರ್‌ವೀಲ್ ಕ್ಲಬ್ ನೂರು ವರ್ಷ ಪೂರೈಸಿರುವುದರಿಂದ ನೂರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಅಂಗವಿಕಲರಿಗೆ ಮೂರು ಚಕ್ರದ ಸೈಕಲ್‌ಗಳನ್ನು ನೀಡಲಾಗಿದೆ. ತ್ಯಾಗ ಮತ್ತು ಸೇವಾ ಮನೋಭಾವನೆಯಿಟ್ಟುಕೊಂಡು ಕೆಲಸ ಮಾಡಲಾಗುತ್ತಿದೆ ಎಂದರು.

ನೂರನೆ ವರ್ಷದ ದಿನಾಚರಣೆ ಅಂಗವಾಗಿ ಮಹಿಳೆಯರಿಗೆ ವಿವಿಧ ಗೇಮ್ಸ್ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.ಇನ್ನರ್‌ವೀಲ್ ಕ್ಲಬ್ ಚಿತ್ರದುರ್ಗ ಜಂಟಿ ಕಾರ್ಯದರ್ಶಿ ವೀಣ ಜಯರಾಂ, ಪಿ.ಡಿ.ಸಿ.ಗಳಾದ ಜ್ಯೋತಿ ಲಕ್ಷ್ಮಣ್, ವೀಣಸ್ವಾಮಿ, ಭಾಗ್ಯಕ್ಕ, ನಂದಿನಿ ಸುಹಾಸ್, ಶೈಲಜಾರೆಡ್ಡಿ, ದೀಪದತ್, ಅಮೃತ, ಪಾಸ್ಟ್ ಪ್ರೆಸಿಡೆಂಟ್ ಮತ್ತು ಮೆಂಬರ್ಸ್‌ಗಳು ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.

# ಧರ್ಮಸ್ಥಳ ಸಂಸ್ಥೆ ಮಹಿಳೆಯರಿಗೆ ಶಿಸ್ತು ಕಲಿಸುವಲ್ಲಿ ನಿರಂತರವಾಗಿ ಶ್ರಮಿಸುತ್ತಿದೆ

## ಸದ್ಗುರು ಆಯುರ್ವೇದ ಉತ್ಪನ್ನಗಳ ಮಾಲೀಕರಾದ ಡಿ.ಎಸ್.ಪ್ರದೀಪ್

» **ಹೊಸದುರ್ಗ**

ಡಾ.ವೀರೇಂದ್ರ ಹೆಗ್ಗಡೆ ಹಾಗೂ ಡಾ.ಹೇಮಾವತಿ ಹೆಗಡೆ ಅವರು ತ್ರಿವಿಧ ದಾಸೋಹಿಗಳಾಗಿ ಕೆಲಸ ಮಾಡುತ್ತಿರುವುದು ನಮ್ಮೆಲ್ಲರ ಪುಣ್ಯ. ಈ ಧರ್ಮಸ್ಥಳ ಸಂಸ್ಥೆ ಮಹಿಳೆಯರಿಗೆ ಶಿಸ್ತು ಕಲಿಸುವಲ್ಲಿ ನಿರಂತರವಾಗಿ ಶ್ರಮಿಸುತ್ತಿದೆ ಎಂದು ಸದ್ಗುರು ಆಯುರ್ವೇದ ಉತ್ಪನ್ನಗಳ ಮಾಲೀಕರಾದ ಡಿ.ಎಸ್.ಪ್ರದೀಪ್ ಹೇಳಿದರು.



ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್, ಜ್ಞಾನವಿಕಾಸ ಕೇಂದ್ರ ಹೊಸದುರ್ಗ ತಾಲೂಕು ಘಟಕದಿಂದ ಪಟ್ಟಣದ ಶ್ರೀ ರಾಧಾಕೃಷ್ಣ ಸಮುದಾಯ ಭವನದಲ್ಲಿ ಆಯೋಜಿಸಿದ್ದ ತಾಲೂಕು ಮಟ್ಟದ ಮಹಿಳಾ ಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮಹಿಳೆಯರು ಈ ಸಂಸ್ಥೆಗೆ ಬರುವ ಮುಂಚೆ ಹೇಗಿದ್ದರು, ಬಂದ ನಂತರದ ಜೀವನದಲ್ಲಿ ಹೇಗೆ ಬದಲಾವಣೆ ಆಗಿದೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಂಡರೆ ಈ ಸಂಸ್ಥೆಯ ಕಾರ್ಯ ಏನೆಂದು ತಿಳಿಯುತ್ತದೆ ಎಂದು ಹೇಳಿದರು.

ಈ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಲ್ಲಿ ಹಣಕಾಸಿನ ವ್ಯವಹಾರವು ಶಿಸ್ತು ಬದ್ಧವಾಗಿ ನಡೆಯುತ್ತದೆ. ಮಹಿಳೆಯರು ಹೇಗೆ ದುಡಿಯಬೇಕು, ಉಳಿತಾಯ ಹೇಗೆ ಮಾಡಬೇಕು, ಎಂಬ ಮಾಹಿತಿಯನ್ನು ನೀಡುವ ಮೂಲಕ ಸ್ವಾವಲಂಬನೆಯ ಬದುಕಿಗೆ ಉತ್ತಮ ದಾರಿದೀಪವಾಗಿ ಈ ಸಂಸ್ಥೆ ಕಾರ್ಯ ಮಾಡುತ್ತಿದೆ. ಅಭಿವೃದ್ಧಿ ಪರ ಜಾಗೃತಿಯನ್ನು ನಿರಂತರವಾಗಿ ಮೂಡಿಸುತ್ತಿದೆ. ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಯಾದಲ್ಲಿ ಕುಟುಂಬಕ್ಕೆ ಆರ್ಥಿಕ ಬಲ ಬರುತ್ತದೆ. ಇದರಿಂದ ಮುಂದೆ ನಿಮ್ಮ ಹಾಗೂ ಕುಟುಂಬದ ಗೌರವವೂ ಹೆಚ್ಚಾಗುತ್ತದೆ ಎಂದು ಸಲಹೆ ನೀಡಿದರು. ತಾಲೂಕು ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪಿ.ದೀಪಿಕಾ ಸತೀಶ್ ಸಾಮಾಜಿಕ ಜಾಲತಾಣದಿಂದ ಮಕ್ಕಳ ರಕ್ಷಣೆಯಲ್ಲಿ ಹೆತ್ತವರ ಪಾತ್ರ ಹಾಗೂ ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ಸಿಂಧು ಅಶೋಕ್ ಅವರು ಆರ್ಥಿಕ ಸ್ವಾಲಂಬಿ ಜೀವನದಲ್ಲಿ ಮಹಿಳೆಯರ ಹೆಜ್ಜೆ ವಿಷಯ ಕುರಿತು ಉಪನ್ಯಾಸ ನೀಡಿದರು.

ಪ್ರಗತಿ ಬಂದು ಸ್ವಸಹಾಯ ಸಂಘ ಒಕ್ಕೂಟದ ಅಧ್ಯಕ್ಷೆ ಹೇಮಾ ಮಂಜುನಾಥ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್ ಜಿಲ್ಲಾ ನಿರ್ದೇಶಕ ವಿನಯಕುಮಾರ್ ಸುವರ್ಣ, ದಿನೇಶ್, ಬಿ.ಪಿ.ಓಂಕಾರಪ್ಪ ಸೇರಿ ಹಲವು ಮುಖಂಡರು ಹಾಜರಿದ್ದರು.

## ಕಟ್ಟಡ ಕಾರ್ಮಿಕರ ಸಮಿತಿಯಿಂದ ಸಹಿ ಸಂಗ್ರಹ ಚಳುವಳಿ



» **ಚಿತ್ರದುರ್ಗ**

ಕೇಂದ್ರ ಸರ್ಕಾರ ಕಳೆದ ಹತ್ತು ವರ್ಷಗಳಿಂದ ಕಾರ್ಮಿಕರ ಹೊಟ್ಟೆ ಮೇಲೆ ಹೊಡೆಯುವ ಕಾನೂನುಗಳನ್ನು ಜಾರಿಗೆ ತರುತ್ತಿದೆ ಎಂದು ನಿವೃತ್ತ ಪ್ರಾಚಾರ್ಯರಾದ ಜೆ.ಯಾದವರೆಡ್ಡಿ ಕಳವಳ ವ್ಯಕ್ತಪಡಿಸಿದರು.

ಸ್ವಾಮಿ ವಿವೇಕಾನಂದರ ಜಯಂತಿ ಅಂಗವಾಗಿ ಜಿಲ್ಲಾ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಜಿಲ್ಲಾ ಸಮಿತಿಯಿಂದ ಒನಕೆ ಓಬವ್ವ ವೃತ್ತದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಸಹಿ ಸಂಗ್ರಹ ಉದ್ಘಾಟಿಸಿ ಮಾತನಾಡಿದರು.ದೇಶದ ಪ್ರಧಾನಿ ನರೇಂದ್ರಮೋದಿರವರು ಕಾರ್ಮಿಕರ ಪರವಾಗಿದ್ದ 29 ಕಾನೂನುಗಳಲ್ಲಿ ಒಂದನ್ನು ಮಾತ್ರ ಉಳಿಸಿ ಎಲ್ಲಾ ಕಾನೂನುಗಳನ್ನು ರದ್ದುಪಡಿಸಿರುವುದು ದುರಂತ. ಕಾರ್ಮಿಕ ಮಕ್ಕಳಿಗೆ ನೀಡಲಾತ್ತಿರುವ ಶೈಕ್ಷಣಿಕ ಧನ ಸಹಾಯವನ್ನು ಸರ್ಕಾರ ವಿಸರ್ಜಿಸಿದೆ. ದುಡಿಯುವ ಕೈಗಳಿಗೆ ಕೆಲಸವಿಲ್ಲದೆ ನಿರುದ್ಯೋಗ ಸಮಸ್ಯೆ ಜಾಸ್ತಿಯಾಗಿದೆ. ವಿದ್ಯಾವಂತ ಯುವಕರು ಕೆಲಸಕ್ಕಾಗಿ ಬೀದಿ ಬೀದಿ ಅಲೆಯುತ್ತಿದ್ದಾರೆ. ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ, ಅಗತ್ಯ ವಸ್ತುಗಳ ಬೆಲೆ ಜಾಸ್ತಿಯಾಗಿರುವುದರಿಂದ ಜನಸಾಮಾನ್ಯರು ತತ್ತರಿಸುವಂತಾಗಿದೆ ಎಂದು ಹೇಳಿದರು.ಜಿಲ್ಲಾ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ರಾಜ್ಯ ಉಪಾಧ್ಯಕ್ಷ ಸಿ.ಕೆ.ಗೌಸ್‌ಪೀರ್ ಮಾತನಾಡಿ ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ನೀತಿ ವಿರುದ್ದ ಸ್ವಾಮಿ ವಿವೇಕಾನಂದರ ಜಯಂತಿಯಂದು ಸಹಿ ಸಂಗ್ರಹ ಚಳುವಳಿ ಹಮ್ಮಿಕೊಂಡಿದ್ದು, ಜಿಲ್ಲೆಯಾದ್ಯಂತ ಎರಡರಿಂದ ಮೂರು ಲಕ್ಷ ಸಹಿ ಸಂಗ್ರಹಿಸಿ ಕೇಂದ್ರಕ್ಕೆ ಕಳಿಸುತ್ತೇವೆ. ಕಾರ್ಮಿಕ ಹಕ್ಕುಗಳನ್ನು ದಮನಗೊಳಿಸಿರುವ ಕೇಂದ್ರ ಸರ್ಕಾರ ಅಗತ್ಯ ವಸ್ತುಗಳ ಬೆಲೆ ಏರಿಸಿರುವುದನ್ನು ಖಂಡಿಸಿ ಹೋರಾಟ ಮಾಡಿಕೊಂಡು ಬರುತ್ತಿದ್ದೇವೆಂದರು.ನಿವೃತ್ತ ಪ್ರಾಚಾರ್ಯರಾದ ಡಾ.ಅಶೋಕ್‌ಕುಮಾರ್ ಸಂಗೇನಹಳ್ಳಿ, ಮಂಜುನಾಥ್, ಮಲ್ಲಿಕಾರ್ಜುನ್, ನಾಗರಾಜ್ ಇನ್ನು ಮುಂತಾದವರು ಈ ಸಂದರ್ಭದಲ್ಲಿದ್ದರು.



## ಅಂತರರಾಷ್ಟ್ರೀಯ ಇನ್ನರ್ ವ್ಹೀಲ್ ಕ್ಲಬ್ ಶತಮಾನೋತ್ಸವ

» **ಚಳ್ಳಕೆರೆ**

ಅಂತರರಾಷ್ಟ್ರೀಯ ಇನ್ನರ್ ವ್ಹೀಲ್ ಕ್ಲಬ್‌ನ ಶತಮಾನೋತ್ಸವ ಹಿನ್ನೆಲೆಯಲ್ಲಿ ನಗರದ ವಿದ್ಯಾಭಾರತಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ನೋಟ್‌ಪುಸ್ತಕ, ಲೇಖನ ಸಾಮಾಗ್ರಿಗಳನ್ನು ವಿತರಣೆ ಮಾಡಲಾಯಿತು ಎಂದು ಅಧ್ಯಕ್ಷೆ ಮೀರಾರಮೇಶ್ ತಿಳಿಸಿದರು.

ಅವರು, ನಗರದ ರೋಟರಿ ಕ್ಲಬ್‌ನಲ್ಲಿ ಆಯೋಜಿಸಿದ್ದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಕಳೆದ ಸುಮಾರು 100 ವರ್ಷಗಳಿಂದ ಅಂತರರಾಷ್ಟ್ರೀಯ ಇನ್ನರ್ ವ್ಹೀಲ್ ಕ್ಲಬ್ ಸಾಮಾಜಿಕ ಸೇವಾ ಕಾರ್ಯಗಳಲ್ಲಿ ನಿರಂತರ ತೊಡಗಿಕೊಂಡಿದೆ. ವಿಶೇಷವಾಗಿ ಕಳೆದ 2020ರಲ್ಲಿ ಸಂಭವಿಸಿದ ಕೊರೋನಾ ಸಂದರ್ಭದಲ್ಲೂ ಸಹ ಸಾರ್ವಜನಿಕರ ಆರೋಗ್ಯ ರಕ್ಷಣೆಗೆ ಸೇರಿದಂತೆ ಉಚಿತವಾಗಿ ಅನೇಕ ಸಾಮಾಗ್ರಿಗಳನ್ನುನೀಡುವಮೂಲಕನೆರವುನೀಡಿದೆ. ಇಂತಹ ಸಂಸ್ಥೆಯ ಶತದಿನೋತ್ಸವ ಆಚರಣೆ ನಮ್ಮೆಲ್ಲರಿಗೂ ಹೆಮ್ಮೆ ಎಂದರು. ಕಾರ್ಯಕ್ರಮದಲ್ಲಿ ಉಪಾಧ್ಯಕ್ಷೆ ಸುಧಾಪ್ರಹ್ಲಾದ್, ಕಾರ್ಯದರ್ಶಿ ಸುನಿತಾಬಸವರಾಜು, ಖಜಾಂಚಿ ಪದ್ಮನಾಗರಾಜು, ಐಎಸ್‌ಯು ಸದಸ್ಯೆ ಮಂಜುಳಾರಾಜ್, ನಿರ್ದೇಶಕರಾದ ರಾಜೇಶ್ವರಿಶ್ರೀನಾಥ, ಅಪರ್ಣ, ಕವಿತಾವಿಶುಕುಮಾರ್, ಸೂರ್ಯಪ್ರಭಾವೀರಭದ್ರಪ್ಪ, ಜ್ಯೋತಿನಾಗರಾಜು, ಅರುಣಾರಾಜ್, ಜಾನಕಿ, ಅನ್ನಪೂರ್ಣಪ್ರಕಾಶ್ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಪ್ರಕೃತಿ ಆಂಗ್ಲ ಶಾಲೆ ವಾರ್ಷಿಕೋತ್ಸವಕ್ಕೆ ಸ್ವಾಮೀಜಿ ಚಾಲನೆ

» **ಚಿತ್ರದುರ್ಗ**

ಇಂದಿನ ಶಿಕ್ಷಣ ಸಂಸ್ಥೆ ವ್ಯಾಪಾರೀಕರಣವಾಗಿರುವ ಕಾಲದಲ್ಲಿ ಪ್ರಕೃತಿ ಆಂಗ್ಲ ಹಿರಿಯ ಪ್ರಾಥಮಿಕ ಶಾಲೆ ಮಕ್ಕಳಿಗೆ ಸಂಸ್ಕೃತಿ, ಸಂಸ್ಕಾರ, ನಾಗರೀಕತೆ ಕಲಿಸುತ್ತಿರುವುದು ನಿಜಕ್ಕೂ ಸಂತೋಷದ ಸಂಗತಿ ಎಂದು ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಸ್ವಾಮೀಜಿ ಶ್ಲಾಘಿಸಿದರು.



ತ.ರಾ.ಸು.ರಂಗಮಂದಿರದಲ್ಲಿ ಗುರುವಾರ ನಡೆದ ಶಾಲಾ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣ ಎನ್ನುವುದು ನಾಲ್ಕು ಗೋಡೆಗಳ ನಡುವೆ ಶಿಕ್ಷಕರು ಮತ್ತು ಮಕ್ಕಳ ನಡುವಿನ ಸಂಬಂಧಕ್ಕಷ್ಟೆ ಸೀಮಿತವಾಗಿರಬಾರದೆನ್ನುವ ಉದ್ದೇಶದಿಂದ ಪ್ರಕೃತಿ ಆಂಗ್ಲ ಹಿರಿಯ ಪ್ರಾಥಮಿಕ ಶಾಲೆ ವೈವಿದ್ಯಮಯ ಚಟುವಟಿಕೆ ಮೂಲಕ ಮಕ್ಕಳಿಗೆ ಸಾಂಸ್ಕೃತಿಕ ಹಾಗೂ ಮನೋರಂಜನೆಯನ್ನು ನೀಡುತ್ತ ಬರುತ್ತಿದೆ. ಇಲ್ಲಿ ಶಿಕ್ಷಣ ಕಲಿಯುವ ಮಕ್ಕಳು ಮುಂದೆ ಜೀವನದಲ್ಲಿ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲಿ ಎಂದು ಹಾರೈಸಿದರು.

ವಿಜ್ಞಾನ ಶಿಕ್ಷಕ ಹೆಚ್.ಎಸ್.ಟಿ.ಸ್ವಾಮಿ ಖಗೋಳ ಮತ್ತು ಮೂಢನಂಬಿಕೆಗಳ ವಿಷಯ ಕುರಿತು ಮಕ್ಕಳಿಗೆ ಪ್ರಾತ್ಯಕ್ಷಿಕೆಯನ್ನು ಪ್ರದರ್ಶಿಸಿದರು.

ಪರಿವರ್ತನಾ ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ರೊ.ಎಂ.ಕೆ.ರವೀಂದ್ರ, ಕಾರ್ಯದರ್ಶಿ ಎಂ.ಕಾರ್ತಿಕ್, ಕೋಟ್ಲ ಎಜುಕೇಶನ್ ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟಿ ಶ್ರೀಮತಿ ಕೆ.ಸುಮ, ಆರ್ಯವೈಶ್ಯ ಸಂಘದ ಅಧ್ಯಕ್ಷ ಎಲ್.ಇ.ಶ್ರೀನಿವಾಸಬಾಬು, ನಟ ಬುಲೆಟ್ ವಿನು, ರೊ.ಉಮೇಶ್ ವಿ.ತುಪ್ಪದ್, ರೊ. ಮಾರುತಿ ಮೋಹನ್, ಶ್ರೀಮತಿ ಎಸ್.ಶ್ವೇತ ಕಾರ್ತಿಕ್, ಶ್ರೀಮತಿ ವೇದ ರವೀಂದ್ರ, ಸಿ.ಹರೀಶ,ರೊ.ಡಾ.ಪಿ.ಮಧುಸೂದನರೆಡ್ಡಿ, ಎಸ್.ಜಿ.ರಂಗನಾಥ್, ಮುಖ್ಯ ಶಿಕ್ಷಕಿ ಶ್ರೀಮತಿ ಶಶಿಕಲ ಎಂ.ಎಸ್. ಹಾಗೂ ಶಿಕ್ಷಕ ವೃಂದದವರುಶಾಲಾವಾರ್ಷಿಕೋತ್ಸವದಲ್ಲಿ ಭಾಗವಹಿಸಿದ್ದರು.

ಮಕ್ಕಳಿಂದ ವೈವಿದ್ಯಮಯ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T